# ಸಶಸ್ತ್ರ ಮೀಸಲು ಪೊಲೀಸ್ ಸಬ್-ಇನ್ಸ್‌ಪೆಕ್ಟರ್ (ಆರ್.ಎಸ್.ಐ.ಸಿಎಆರ್/ಡಿಎಆರ್) ಹುದ್ದೆಗೆ ಅರ್ಜಿ- 2020-21

## ಅಧಿಸೂಚನೆ ಸಂಖ್ಯೆ. 92/ನೇಮಕಾತಿ-2/2020-21

**ಒಟ್ಟು ಹುದ್ದೆಗಳು: 45**

**ಸಶಸ್ತ್ರ ಮೀಸಲು ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ (ಸಿಎಆರ್/ಡಿಎಆರ್) ಮತ್ತು ಕಲ್ಯಾಣ ಕರ್ನಾಟಕ ಪ್ರದೇಶದ (ಕೆ.ಕೆ) (ಪುರುಷ) ನೇಮಕಾತಿ- 2020-21 ಹುದ್ದೆಗಳಿಗೆ ಸಂಬಂಧಿಸಿದಂತೆ ಅಭ್ಯರ್ಥಿಗಳು ಕೇಳಬಹುದಾದಂತಹ ಪ್ರಶ್ನೆಗಳು**

1) **ಸಶಸ್ತ್ರ ಮೀಸಲು ಪೊಲೀಸ್ ಸಬ್‌ಇನ್ಸ್‌ಪೆಕ್ಟರ್** ಆರ್‌ಎಸ್‌ಐ(ಡಿಎಆರ್)ಹುದ್ದೆಗಳಿಗೆ ನಿಗದಿಪಡಿಸಲಾಗಿರುವ ಕನಿಷ್ಟ ವಯೋಮಿತಿ ಎಷ್ಟು ?

ಉ: ವೃಂದ ಮತ್ತು ನೇಮಕಾತಿ ತಿದ್ದುಪಡಿ ನಿಯಮ, 2009ರ ಪ್ರಕಾರ ಸಶಸ್ತ್ರ ಮೀಸಲು ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ (ಆರ್.ಎಸ್.ಐ) (ಸಿಎಆರ್/ಡಿಎಆರ್) (ಪುರುಷ) ಹುದ್ದೆಗೆ ವಯೋಮಿತಿಯು ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಲಾಗಿರುವ ಕೊನೆಯ ದಿನಾಂಕಕ್ಕೆ ಅಂದರೆ **26.06.2020**ಕ್ಕೆ ಕನಿಷ್ಠ 21 ವರ್ಷ ತುಂಬಿರಬೇಕು.

2) **ಸಶಸ್ತ್ರ ಮೀಸಲು ಪೊಲೀಸ್ ಸಬ್‌ಇನ್ಸ್‌ಪೆಕ್ಟರ್** ಆರ್‌ಎಸ್‌ಐ(ಡಿಎಆರ್) ಹುದ್ದೆಗಳಿಗೆ ನಿಗದಿಪಡಿಸಲಾಗಿರುವ ಗರಿಷ್ಠ ವಯೋಮಿತಿ ಎಷ್ಟು ?

ಉ: ಕರ್ನಾಟಕ ರಾಜ್ಯ ಪೊಲೀಸ್ ಲಿಪಿಕ ಸೇವೆಗಳನ್ನು ಒಳಗೊಂಡ (ನೇಮಕಾತಿ) (ತಿದ್ದುಪಡಿ) ನಿಯಮಗಳು 2009ರ ಪ್ರಕಾರ ಸಶಸ್ತ್ರ ಮೀಸಲು ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ (ಆರ್.ಎಸ್.ಐ) (ಡಿಎಆರ್) (ಪುರುಷ) ಹುದ್ದೆಗೆ ಗರಿಷ್ಠ ವಯೋಮಿತಿಯು ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಲಾಗಿರುವ ಕೊನೆಯ ದಿನಾಂಕಕ್ಕೆ ಅಂದರೆ **26.06.2020**ಕ್ಕೆ ಸಾಮಾನ್ಯ ವರ್ಗಕ್ಕೆ ಸೇರಿದ ಅಭ್ಯರ್ಥಿಗಳಿಗೆ ಗರಿಷ್ಠ 26 ವರ್ಷ ಹಾಗೂ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ / ಇತರೆ ಹಿಂದುಳಿದ ವರ್ಗಕ್ಕೆ ಸೇರಿದ ಅಭ್ಯರ್ಥಿಗಳಿಗೆ ಗರಿಷ್ಠ 28 ವರ್ಷ ಮೀರಿರಬಾರದು.ವೃಂದ ಮತ್ತು ನೇಮಕಾತಿ ತಿದ್ದುಪಡಿ ನಿಯಮ, 2009ರ ಪ್ರಕಾರ ಸಶಸ್ತ್ರ ಮೀಸಲು ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ (ಆರ್.ಎಸ್.ಐ) (ಸಿಎಆರ್/ಡಿಎಆರ್) (ಪುರುಷ) ಹುದ್ದೆಗೆ ಸೇವಾನಿರತ ಅಭ್ಯರ್ಥಿಗಳು ಗರಿಷ್ಠ ವಯೋಮಿತಿಯೂ ಅರ್ಜಿ ಸಲ್ಲಿಸಲು ನಿಗದಿಪಡಿಸಲಾಗಿರುವ ಕೊನೆಯ ದಿನಾಂಕಕ್ಕೆ ಅಂದರೆ **26.06.2019**ಕ್ಕೆ ಸಾಮಾನ್ಯ ವರ್ಗಕ್ಕೆ ಸೇರಿದ ಅಭ್ಯರ್ಥಿಗಳಿಗೆ ಗರಿಷ್ಠ 35 ವರ್ಷಗಳು ಹಾಗೂ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ/ ಇತರೆ ಹಿಂದುಳಿದ ವರ್ಗಕ್ಕೆ ಸೇರಿದ ಅಭ್ಯರ್ಥಿಗಳಿಗೆ ಗರಿಷ್ಠ 40 ವರ್ಷಗಳು ಮೀರಿರಬಾರದು ಹಾಗೂ ಕನಿಷ್ಠ 5 ವರ್ಷಗಳ ಸೇವೆಯನ್ನು ಇಲಾಖೆಯಲ್ಲಿ ಎ.ಎಸ್.ಐ, ಹೆಚ್.ಸಿ, ಪಿ.ಸಿಯಾಗಿ ಸಲ್ಲಿಸಿರಬೇಕು.

3) ಮಾಜಿ ಸೈನಿಕರಿಗೆ ನಿಗಧಿಪಡಿಸಿರುವ ವಯೋಮಿತಿ ?

ಉ: ಮಾಜಿ ಸೈನಿಕ ಅಭ್ಯರ್ಥಿಗಳು ಸೇನೆಯಲ್ಲಿ ಸೇವೆ ಸಲ್ಲಿಸಿದ ಅವಧಿಯ ಜೊತೆಗೆ ಹೆಚ್ಚುವರಿ 03 ವರ್ಷಗಳ ರಿಯಾಯಿತಿಯನ್ನು ನೀಡಲಾಗುವುದು.

4) **ಸಶಸ್ತ್ರ ಮೀಸಲು ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ (ಆರ್.ಎಸ್.ಐ) (ಡಿಎಆರ್) (ಪುರುಷ) ಹುದ್ದೆಗಳಿಗೆ ಸಂಬಂಧಿಸಿದಂತೆ:** ವಿದ್ಯಾರ್ಹತೆ ಎಷ್ಟು ?

ಉ: **ಸಶಸ್ತ್ರ ಮೀಸಲು ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ (ಆರ್.ಎಸ್.ಐ) (ಡಿಎಆರ್) (ಪುರುಷ) ಹುದ್ದೆಗಳಿಗೆ ಸಂಬಂಧಿಸಿದಂತೆ:** ಅರ್ಜಿ ಸಲ್ಲಿಸಲು ನಿಗದಿ ಪಡಿಸಿರುವ ಕೊನೆಯ ದಿನಾಂಕ, ಅಂದರೆ **26.06.2019** ಕ್ಕೆ ಯು.ಜಿ.ಸಿ. ಇಂದ ಮಾನ್ಯತೆ ಪಡೆದಿರುವ ಅಂಗೀಕೃತ ವಿಶ್ವವಿದ್ಯಾಲಯದಲ್ಲಿ ಪದವಿ ಅಥವಾ ತತ್ಸಮಾನ ಪದವಿಯನ್ನು ಹೊಂದಿರಬೇಕು ಹಾಗೂ ಮಾಜಿ ಸೈನಿಕ ಅಭ್ಯರ್ಥಿಗಳು ಪದವಿ ಪ್ರಮಾಣ ಪತ್ರ ಅಥವಾ ಸೈನ್ಯದಲ್ಲಿ ನೀಡಿದ ಪದವಿ ಪ್ರಮಾಣ ಪತ್ರವನ್ನು ಹೊಂದಿರಬೇಕು.

**ಟಿಪ್ಪಣಿ:**

**i) ಮೇಲೆ ನಮೂದಿಸಿರುವ ವಿದ್ಯಾರ್ಹತೆ ಹಾಗೂ ಅನುಭವವನ್ನು ಹೊಂದದೇ ಇರುವ ಅಭ್ಯರ್ಥಿಗಳು ನೇಮಕಾತಿ ಪ್ರಕ್ರಿಯೆಯಲ್ಲಿ ಭಾಗವಹಿಸಿದ್ದು, ನಂತರ ನಿಗದಿಪಡಿಸಲಾದ ವಿದ್ಯಾರ್ಹತೆ ಮತ್ತು ಅನುಭವವನ್ನು ಹಾಗೂ ಅಂಕಪಟ್ಟಿ ಹೊಂದಿರುವುದಿಲ್ಲವೆಂದು ನೇಮಕಾತಿ ಸಮಿತಿಗೆ ಪತ್ತೆಯಾದಲ್ಲಿ ಅಂತಹ ಅಭ್ಯರ್ಥಿಗಳ ಅಭ್ಯರ್ಥಿತನವನ್ನು ಯಾವುದೇ ಹಂತದಲ್ಲಾದರೂ ರದ್ದುಪಡಿಸಲಾಗುವುದು.**

**ii) ಡಿಪ್ಲೊಮಾ ಇತ್ಯಾದಿ ವಿದ್ಯಾರ್ಹತೆಗಳು ಪದವಿಗೆ ಸಮಾನವಾಗುವುದಿಲ್ಲ. ಆದ್ದರಿಂದ ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ ಹುದ್ದೆಗೆ ಈ ವಿದ್ಯಾರ್ಹತೆಯ ಅಭ್ಯರ್ಥಿಗಳು ಅರ್ಹರಾಗುವುದಿಲ್ಲ.**

**iii) ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ನಿಗದಿತ ವಿದ್ಯಾರ್ಹತೆಯಾದ ಪದವಿಯನ್ನು ಪಡೆಯಲು ಪರೀಕ್ಷೆ ಬರೆದು ಫಲಿತಾಂಶಕ್ಕಾಗಿ ಕಾಯುತ್ತಿರುವ ಅಭ್ಯರ್ಥಿಗಳು ಹಾಗೂ ಅಂಕಪಟ್ಟಿ ಇಲ್ಲದೆ ಇರುವ ಅಭ್ಯರ್ಥಿಗಳು ಅರ್ಜಿಗಳನ್ನು ಸಲ್ಲಿಸಲು ಅರ್ಹರಾಗಿರುವುದಿಲ್ಲ. ಮೇಲಿನ ವಿದ್ಯಾರ್ಹತೆಯನ್ನು ಹೊರತುಪಡಿಸಿ ಬೇರೆ ಯಾವ ವಿದ್ಯಾರ್ಹತೆಯನ್ನೂ ಪರಿಗಣಿಸಲಾಗುವುದಿಲ್ಲ.**

5) ಅರ್ಜಿ ಮಾರಾಟವಾಗುತ್ತಿರುವ ಬಗ್ಗೆ ಹೇಗೆ ತಿಳಿದುಕೊಳ್ಳಬಹುದು ?

ಉ: ಅರ್ಜಿ ಮಾರಾಟ ಮಾಡಲಾಗುವುದಿಲ್ಲ. ಆಂಗ್ಲ / ಕನ್ನಡ ದಿನಪತ್ರಿಕೆಗಳಲ್ಲಿ ವ್ಯಾಪಕ ಪ್ರಚಾರವನ್ನು ನೀಡುವುದಲ್ಲದೆ ದೂರದರ್ಶನ ಮತ್ತು ಆಕಾಶವಾಣಿಗಳಲ್ಲಿ ಪ್ರಸಾರ ಮಾಡಲಾಗುವುದು. ಕಛೇರಿಯ ಅಧಿಕೃತ ವೆಬ್‌ಸೈಟ್ www.ksp.gov.in or rec20.ksp-online.in or http://rsinhk20.ksp-online.inನಲ್ಲಿ ನೀಡಲಾಗುವ ಅರ್ಜಿಯನ್ನು ಭರ್ತಿ ಮಾಡಿ ಸಲ್ಲಿಸಬೇಕಾಗಿರುತ್ತದೆ.

6. ಅಭ್ಯರ್ಥಿಗಳು ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಲು ಲಭ್ಯವಿರುವ ಖಾಲಿ ಹುದ್ದೆಗಳು?

ಉ: ಈ ಕೆಳಗೆ ನಮೂದಿಸಿರುವ ಖಾಲಿ ಹುದ್ದೆಗಳ ಸಂಖ್ಯೆ ತಾತ್ಕಾಲಿಕವಾಗಿದ್ದು, ಅವಶ್ಯಕತೆ ಹಾಗೂ ಸಂದರ್ಭಕ್ಕೆ ಅನುಗುಣವಾಗಿ ಬದಲಾವಣೆ ಮಾಡಲಾಗುವುದು.

ಟಿಪ್ಪಣಿ: ಈ ಕೆಳಗೆ ನಮೂದಿಸಿರುವ ಖಾಲಿ ಹುದ್ದೆಗಳ ಸಂಖ್ಯೆ ಮತ್ತು ಮೀಸಲಾತಿ ವರ್ಗೀಕರಣವು ತಾತ್ಕಾಲಿಕವಾಗಿದ್ದು, ಅನಿವಾರ್ಯ ಸಂದರ್ಭದಲ್ಲಿ ಬದಲಾವಣೆಗೆ ಒಳಪಟ್ಟಿರುತ್ತದೆ.

**ಸಶಸ್ತ್ರ ಮೀಸಲು ಪೊಲೀಸ್ ಸಬ್-ಇನ್ಸ್‌ಪೆಕ್ಟರ್ (ಆರ್‌ಎಸ್‌ಐ) (ಸಿಎಆರ್/ಡಿಎಆರ್) (ಪುರುಷ) ಖಾಲಿ ಹುದ್ದೆಗಳ ವಿವರ:**

| | | |
|---|---|---|
| ಎ) ಸಶಸ್ತ್ರ ಮೀಸಲು ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ (ಪುರುಷ) | – | 34 |
| ಬಿ) ಸಶಸ್ತ್ರ ಮೀಸಲು ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ ಸೇವೆಯಲ್ಲಿರುವವರಿಗೆ | – | 06 |
| **ಒಟ್ಟು** | = | **40** |

**ಕಲ್ಯಾಣ ಕರ್ನಾಟಕ ಮೀಸಲಾತಿಗೊಳಪಡುವ ಸಶಸ್ತ್ರ ಮೀಸಲು ಪೊಲೀಸ್ ಸಬ್-ಇನ್ಸ್‌ಪೆಕ್ಟರ್ (ಆರ್‌ಎಸ್‌ಐ) (ಸಿಎಆರ್/ಡಿಎಆರ್) (ಪುರುಷ) ಖಾಲಿ ಹುದ್ದೆಗಳ ವಿವರ:**

| | | |
|---|---|---|
| ಎ) ಸಶಸ್ತ್ರ ಮೀಸಲು ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ (ಪುರುಷ) (ಸ್ಥಳೀಯ) | – | 03 |
| ಬಿ) ಸಶಸ್ತ್ರ ಮೀಸಲು ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ ಸೇವೆಯಲ್ಲಿರುವವರಿಗೆ(ಸ್ಥಳೀಯ) | – | 01 |
| ಸಿ) ಸಶಸ್ತ್ರ ಮೀಸಲು ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ (ಪುರುಷ) (ಪರಸ್ಥಳೀಯ) | – | 01 |
| **ಒಟ್ಟು** | = | **05** |

**<u>ಟಿಪ್ಪಣಿ:</u> ಮೇಲ್ಕಂಡ ಹುದ್ದೆಗಳಿಗೆ ಆಯುಕ್ತರ/ವಲಯ ಕಛೇರಿಗಳು ನೀಡಿರುವ ವರ್ಗೀಕರಣವನ್ನು ಅನುಬಂಧ–'ಎ' ನಲ್ಲಿ ಮತ್ತು ಕ್ರೂಢೀಕೃತ ವರ್ಗೀಕರಣವನ್ನು ಅನುಬಂಧ–'ಬಿ'ನಲ್ಲಿ ಈ ಅಧಿಸೂಚನೆಯ ಕೊನೆಯಲ್ಲಿ ನೀಡಲಾಗಿರುತ್ತದೆ.**

7) ನೇರ ಅಭ್ಯರ್ಥಿಯಾಗಿ ಅರ್ಜಿ ಸಲ್ಲಿಸಲು ಇರಬೇಕಾದ ಅರ್ಹತೆಗಳೇನು ?

ಉ: <u>ಆರ್‌ಎಸ್‌ಐ, ಡಿಎಆರ್/ಸಿಎಆರ್) ಹುದ್ದೆಗೆ,</u>

ಪುರುಷ ಅಭ್ಯರ್ಥಿಯಾಗಿ ಅರ್ಜಿ ಸಲ್ಲಿಸಲು ಕನಿಷ್ಠ ವಯಸ್ಸು 21 ವರ್ಷ ಹಾಗೂ ಸಾಮಾನ್ಯ ಅಭ್ಯರ್ಥಿಗಳಿಗೆ ಗರಿಷ್ಠ 26 ವರ್ಷದೊಳಗಿರಬೇಕು ಹಾಗೂ ಹಿಂದುಳಿದ ವರ್ಗಗಳ ಅಭ್ಯರ್ಥಿಗಳು ವಯಸ್ಸು ಗರಿಷ್ಟ 28 ವರ್ಷದೊಳಗಿರಬೇಕು. ಯು.ಜಿ.ಸಿಯಿಂದ ಮಾನ್ಯತೆ ಪಡೆದಿರುವ ಅಂಗೀಕೃತ ವಿಶ್ವವಿದ್ಯಾಲಯದಲ್ಲಿ ಪದವಿ ಅಥವಾ ತತ್ಸಮಾನ ಪದವಿಯನ್ನು ಹೊಂದಿರಬೇಕು. ಪುರುಷ ಅಭ್ಯರ್ಥಿಗಳ ಕನಿಷ್ಠ ಎತ್ತರ 168 ಸೆಂ.ಮೀ. ಹೊಂದಿರಬೇಕು. ಆದರೆ ಮಹಿಳಾ ಅಭ್ಯರ್ಥಿಗಳು ಅರ್ಜಿಸಲ್ಲಿಸಲು ಅವಕಾಶವಿಲ್ಲ.

8) ಮಾಜಿ ಸೈನಿಕ ಅಭ್ಯರ್ಥಿಯಾಗಿ ಅರ್ಜಿಸಲ್ಲಿಸಲು ಇರಬೇಕಾದ ಅರ್ಹತೆಗಳೇನು ?

ಉ: <u>ಆರ್‌ಎಸ್‌ಐ,(ಸಿಎಆರ್/ಡಿಎಆರ್) ಹುದ್ದೆಗೆ</u>

ಮಾಜಿ ಸೈನಿಕ ಅಭ್ಯರ್ಥಿಯು ಭೂಸೇನೆ, ನೌಕಾಸೇನೆ ಹಾಗೂ ವಾಯುಸೇನೆಯಲ್ಲಿ ಕರ್ತವ್ಯ ನಿರ್ವಹಿಸಿ ನಿವೃತ್ತಿ ಹೊಂದಿರಬೇಕು. ಸೇನೆಯಲ್ಲಿ ನೀಡುವ ಪದವಿ ಪ್ರಮಾಣಪತ್ರ ಪಡೆದುಕೊಂಡಿರಬೇಕು ಅಥವಾ ಯು.ಜಿ.ಸಿಯಿಂದ ಮಾನ್ಯತೆ ಪಡೆದಿರುವ ಅಂಗೀಕೃತ ವಿಶ್ವವಿದ್ಯಾಲಯದಲ್ಲಿ ಪದವಿ ಅಥವಾ ತತ್ಸಮಾನ ಪದವಿಯನ್ನು ಹೊಂದಿರಬೇಕು.

9) ಸೇವಾ ನಿರತ ಅಭ್ಯರ್ಥಿಯಾಗಿ ಅರ್ಜಿಸಲ್ಲಿಸಲು ಇರಬೇಕಾದ ಅರ್ಹತೆಗಳೇನು ?

ಉ: <u>ಆರ್‌ಎಸ್‌ಐ, (ಸಿಎಆರ್/ಡಿಎಆರ್) ಹುದ್ದೆಗೆ</u>

ಸೇವಾನಿರತ ಅಭ್ಯರ್ಥಿಗಳು ಅಂದರೆ ಪೊಲೀಸ್ ಇಲಾಖೆಯ ವಿವಿಧ ಘಟಕಗಳಲ್ಲಿ ಕನಿಷ್ಟ 5 ವರ್ಷ ಸೇವೆ ಸಲ್ಲಿಸಿರುವ ಪಿ.ಸಿ., ಹೆಚ್.ಸಿ. ಹಾಗೂ ಎ.ಎಸ್.ಐ ಪುರುಷ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಅರ್ಹರಾಗಿರುತ್ತಾರೆ. ಸಾಮಾನ್ಯ ಅಭ್ಯರ್ಥಿಗಳು ಗರಿಷ್ಠ 35 ವರ್ಷದೊಳಗಿರಬೇಕು ಹಾಗೂ ಹಿಂದುಳಿದ ವರ್ಗಗಳ ಅಭ್ಯರ್ಥಿಗಳು ವಯಸ್ಸು ಗರಿಷ್ಟ 40 ವರ್ಷದೊಳಗಿರಬೇಕು. ಯು.ಜಿ.ಸಿಯಿಂದ ಮಾನ್ಯತೆ ಪಡೆದಿರುವ ಅಂಗೀಕೃತ ವಿಶ್ವವಿದ್ಯಾಲಯದಲ್ಲಿ ಪದವಿ ಅಥವಾ ತತ್ಸಮಾನ ಪದವಿಯನ್ನು ಹಾಗೂ ಕನಿಷ್ಠ ಎತ್ತರ 168 ಸೆಂ.ಮೀ, ಹೊಂದಿರಬೇಕು.

10) ಸೇವಾ ನಿರತ ಅಭ್ಯರ್ಥಿ ಯಾರು ?

ಉ: ಪೊಲೀಸ್ ಇಲಾಖೆಯ ವಿವಿಧ ಘಟಕಗಳಲ್ಲಿ ಕನಿಷ್ಟ 5ವರ್ಷ ಸೇವೆ ಸಲ್ಲಿಸಿರುವ ಪಿ.ಸಿ., ಹೆಚ್.ಸಿ. ಹಾಗೂ ಎ.ಎಸ್.ಐ ಪುರುಷ ಅಭ್ಯರ್ಥಿಗಳನ್ನು ಸೇವಾ ನಿರತ ಅಭ್ಯರ್ಥಿಗಳು ಎಂದು ಪರಿಗಣಿಸಲಾಗುವುದು.

11) ನೇಮಕಾತಿಯಲ್ಲಿ ಮಾಜಿ ಸೈನಿಕ ಅಭ್ಯರ್ಥಿಗಳು ಯಾವ ಹುದ್ದೆಗಳಿಗೆ ಅರ್ಜಿ ಸಲ್ಲಿಸಬಹುದು ?

ಉ: ಮಾಜಿ ಸೈನಿಕ ಅಭ್ಯರ್ಥಿಯಾಗಿ ಯಾರು ಅರ್ಜಿ ಸಲ್ಲಿಸುತ್ತಾರೋ ಅವರು ಆರ್‌ಎಸ್‌ಐ, (ಡಿಎಆರ್/ಸಿಎಆರ್) ಹುದ್ದೆಗೆ ಅರ್ಹರಿರುತ್ತಾರೆ.

12) ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ (ಡಿಎಆರ್/ಸಿಎಆರ್) ಹುದ್ದೆಗಳಿಗೆ ನಡೆಸುವ ಲಿಖಿತ ಪರೀಕ್ಷೆಯಲ್ಲಿ ಕೇಳಲಾಗುವ ವಿಷಯಗಳು ಹಾಗೂ ಮೌಖಿಕ ಪರೀಕ್ಷೆಯ ಆಯ್ಕೆ ಮತ್ತು ಸದರಿ ಪರೀಕ್ಷೆಯ ಅಂಕಗಳ ಬಗ್ಗೆ ಮಾಹಿತಿ ನೀಡಿ ?

ಉ: ಪತ್ರಿಕೆ–1ರಲ್ಲಿ ಪ್ರಬಂಧ ಬರಹ, ಸಾರಂಶ ಬರಹ ಮತ್ತು ಭಾಷಾಂತರ (ಕನ್ನಡ ಭಾಷೆಯಿಂದ ಇಂಗ್ಲೀಷ್ ಭಾಷೆಗೆ ಹಾಗೂ ಇಂಗ್ಲೀಷ್ ಭಾಷೆಯಿಂದ ಕನ್ನಡ ಬಾಷೆಗೆ) –50ಅಂಕಗಳ ಪ್ರಶ್ನೆಗಳು ಇರುತ್ತವೆ.

ಪತ್ರಿಕೆ–2ರಲ್ಲಿ ಭಾರತೀಯ ಸಂವಿಧಾನ, ಇತಿಹಾಸ, ಭೂಗೋಳ, ವಿಜ್ಞಾನ, ಕಲೆ, ಸಾಹಿತ್ಯ, ಮಾನಸಿಕ ಸಾಮರ್ಥ್ಯ,

ನೀತಿಶಿಕ್ಷಣ ಇತ್ಯಾದಿಗಳ ಬಗ್ಗೆ –150ಅಂಕಗಳಿಗೆ ಪ್ರಶ್ನೆಗಳು ಇರುತ್ತವೆ.

ಮೌಖಿಕ ಪರೀಕ್ಷೆಗೆ ಅಭ್ಯರ್ಥಿಗಳನ್ನು 1:2 ಪ್ರಮಾಣದಲ್ಲಿ ಆಯ್ಕೆ ಮಾಡಲಾಗುವುದು ಹಾಗೂ ಸದರಿ ಪರೀಕ್ಷೆಗೆ 10 ಅಂಕಗಳು ಇರುತ್ತವೆ.

13) ನೇಮಕಾತಿ ಪ್ರಕ್ರಿಯೆಯಲ್ಲಿ ಭಾಗವಹಿಸಲು ಎಷ್ಟು ಶುಲ್ಕವನ್ನು ಪಾವತಿಸಬೇಕು ?

ಉ: ಎಸ್.ಸಿ, ಎಸ್.ಟಿ, ಕ್ಯಾಟಗರಿ–01 ರ ಅಭ್ಯರ್ಥಿಗಳಿಗೆ – 100/– ಗಳು ಮತ್ತು ಜಿಎಂ, 2ಎ, 2ಬಿ, 3ಎ, 3ಬಿ ರ ಅಭ್ಯರ್ಥಿಗಳಿಗೆ 250/– ಗಳನ್ನು ಪಾವತಿಸಿ ನೇಮಕಾತಿ ಪ್ರಕ್ರಿಯೆಯಲ್ಲಿ ಭಾಗವಹಿಸಬಹುದಾಗಿರುತ್ತದೆ.

14) ಭರ್ತಿ ಮಾಡಿದ ಅರ್ಜಿಗಳನ್ನು ಎಲ್ಲಿ ಸಲ್ಲಿಸಬೇಕಾಗುತ್ತದೆ?

ಉ: ಅಭ್ಯರ್ಥಿಯು ಆನ್‌ಲೈನ್ www.ksp.gov.in ಮುಖಾಂತರ ಭರ್ತಿ ಮಾಡಿದ ಅರ್ಜಿಗಳನ್ನು ನಿಗದಿಪಡಿಸಿದ ಕೊನೆಯ ದಿನಾಂಕ ಅಂದರೆ **26.06.2020**ರ ಸಾಯಂಕಾಲ 6.00 ಗಂಟೆಯೊಳಗೆ ಸಲ್ಲಿಸಬಹುದಾಗಿರುತ್ತದೆ.

**<u>ಸೂಚನೆ:</u>** ಅಭ್ಯರ್ಥಿಗಳು ಒಂದು ಅರ್ಜಿ ಮಾತ್ರ ಸಲ್ಲಿಸಬಹುದಾಗಿದೆ. ಒಂದಕ್ಕಿಂತ ಹೆಚ್ಚು ಅರ್ಜಿಗಳನ್ನು ಸಲ್ಲಿಸಿದ ಪಕ್ಷದಲ್ಲಿ ಅಂತಿಮವಾಗಿ/ ಕೊನೆಯದಾಗಿ ಸಲ್ಲಿಸಿದ ಅರ್ಜಿಯನ್ನು ಮಾತ್ರ ಪರಿಗಣಿಸಲಾಗುವುದು.

15) ಅರ್ಜಿಗಳನ್ನು ಜೆರಾಕ್ಸ್ ಮಾಡಿ ಅಥವಾ ಅರ್ಜಿಗಳನ್ನು ಟೈಪ್ ಮಾಡಿ ಪ್ರತಿಗಳನ್ನು ಸಲ್ಲಿಸಬಹುದೇ?

ಉ: ಇಲ್ಲ. ಇಲಾಖೆಯು ನಿಗದಿ ಪಡಿಸಿರುವ ಮೂಲ ಅರ್ಜಿಯನ್ನು ಆನ್‌ಲೈನ್ ಮುಖಾಂತರ ಸಲ್ಲಿಸಬೇಕಾಗಿರುತ್ತದೆ. ಆನ್‌ಲೈನ್ ಮುಖಾಂತರ ಸಲ್ಲಿಸಿದ ಅರ್ಜಿಯನ್ನು ಮಾತ್ರ ಪರಿಗಣಿಸಲಾಗುವುದು. ಜೆರಾಕ್ಸ್ ಮಾಡಿದ ಅಥವಾ ಖುದ್ದಾಗಿ ಮತ್ತು ಅಂಚೆ ಮೂಲಕ ಸಲ್ಲಿಸುವ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

16) ಯಾವ ರೀತಿಯಲ್ಲಿ ಶುಲ್ಕವನ್ನು ಪಾವತಿಸಬೇಕು?

ಉ: ಆನ್‌ಲೈನ್ ಮೂಲಕ ಸೃಜಿಸಿರುವ ಬ್ಯಾಂಕ್ ಚಲನ್‌ನ್ನು ಮುದ್ರಿಸಿ, ಸ್ಟೇಟ್ ಬ್ಯಾಂಕ್ ಅಫ್ ಇಂಡಿಯಾ ಅಥವಾ ಪೋಸ್ಟ್ ಆಫೀಸ್‌ನಲ್ಲಿ ಶುಲ್ಕವನ್ನು ಪಾವತಿಸಬಹುದಾಗಿದೆ, ಬೇರಾವುದೇ ಬ್ಯಾಂಕಿನಲ್ಲಿ ಪಾವತಿಸಲು ಅವಕಾಶವಿರುವುದಿಲ್ಲ. ಬ್ಯಾಂಕ್ ಹುಂಡಿ, ಪೋಸ್ಟಲ್ ಆರ್ಡರ್, ಮನಿ ಆರ್ಡರ್ ಅಥವಾ ಇನ್ಯಾವುದೇ ಸ್ವರೂಪದಲ್ಲಿ ಶುಲ್ಕವನ್ನು ಪಾವತಿಸತಕ್ಕದ್ದಲ್ಲ, ಶುಲ್ಕವನ್ನು ಪಾವತಿಸದ ಅರ್ಜಿಯನ್ನು ಪರಿಗಣಿಸಲಾಗುವುದಿಲ್ಲ.

17) ಆನ್‌ಲೈನ್ ಮೂಲಕ ಸಲ್ಲಿಸಿರುವ ಅರ್ಜಿಯಲ್ಲಿನ ಅಂಶಗಳನ್ನು ಯಾವುದೇ ಹಂತದಲ್ಲಿ ಬದಲಾವಣೆ ಮಾಡಬಹುದೇ?

ಉ: ಒಮ್ಮೆ ಅಭ್ಯರ್ಥಿಗಳು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿದ ನಂತರ ನೀಡಿರುವ ಮಾಹಿತಿಯನ್ನು ಯಾವುದೇ ಹಂತದಲ್ಲಿ ಬದಲಾವಣೆ ಮಾಡಲು ಅವಕಾಶವಿರುತ್ತದೆ.

**<u>ವಿಶೇಷ ಸೂಚನೆ</u>:–**

**ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕವು ಮುಕ್ತಾಯವಾದ ನಂತರ 10 ದಿನಗಳ ಕಾಲಾವಕಾಶ ನೀಡಲಾಗುತ್ತಿದ್ದು, ಸದರಿ ದಿನಾಂಕದೊಳಗಾಗಿ ಅಭ್ಯರ್ಥಿಯು ತಾನು ಸಲ್ಲಿಸಿರುವ ಅರ್ಜಿಯಲ್ಲಿ ಹೆಸರು, ಜನ್ಮ ದಿನಾಂಕ, ಕೋರಿರುವ ಮೀಸಲಾತಿ ಹಾಗೂ ಇತರೆ ಯಾವುದೇ ಅಂಶಗಳ ಬದಲಾವಣೆ ಮಾಡಬೇಕಾದಲ್ಲಿ ಖುದ್ದಾಗಿ / ಅಂಚೆ ಮೂಲಕ ಸಂಬಂಧಪಟ್ಟ ದೃಢೀಕೃತ ದಾಖಲೆಗಳೊಂದಿಗೆ ಅಡಿಷನಲ್ ಡೈರೆಕ್ಟರ್ ಜನರಲ್ ಆಫ್ ಪೊಲೀಸ್, ನೇಮಕಾತಿ ಕಾರ್ಲಟನ್ ಭವನ, ಅರಮನೆ ರಸ್ತೆ, ಬೆಂಗಳೂರು ರವರ ಕಛೇರಿಗೆ ಸಲ್ಲಿಸತಕ್ಕದ್ದು. ನಿಗದಿಪಡಿಸಿದ ಕೊನೆಯ ದಿನಾಂಕದ ನಂತರ ಸಲ್ಲಿಸುವ ಯಾವುದೇ ಮನವಿಗಳನ್ನು ಪರಿಗಣಿಸಲಾಗುವುದಿಲ್ಲ.**

18). ಒಮ್ಮೆ ಪಾವತಿಸಿದ ಶುಲ್ಕವನ್ನು ಹಿಂಪಡೆಯಬಹುದೇ?

ಉ: ಒಮ್ಮೆ ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಿ, ಸೃಜಿಸಿರುವ ಚಲನ್‌ನಿಂದ ಸಂಬಂಧಪಟ್ಟ ಬ್ಯಾಂಕಿನಲ್ಲಿ ಶುಲ್ಕವನ್ನು ಪಾವತಿಸಿದ ನಂತರ ಯಾವುದೇ ಕಾರಣಗಳಿಂದ ಶುಲ್ಕವನ್ನು ಹಿಂದಿರುಗಿಸುವುದಿಲ್ಲ.ಹಾಗೂ ನೇಮಕಾತಿ ಸಮಿತಿಯು ನೆಡಸುವ ಯಾವುದೇ ಪರೀಕ್ಷೆ ಅಥವಾ ನೇಮಕಾತಿಗಳಿಗೆ ಹೊಂದಿಸಿಕೊಳ್ಳಲಾಗುವುದಿಲ್ಲ.

19) ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದ ನಂತರ ಸಲ್ಲಿಸಿದ ಅರ್ಜಿಗಳು ಮತ್ತು ಪಾವತಿಸಿದ ಶುಲ್ಕವನ್ನು ಪರಿಗಣಿಸಲಾಗುವುದೇ?

ಉ: ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕ: **26.06.2020** ನಂತರ ಅರ್ಜಿಗಳನ್ನು ಸಲ್ಲಿಸಲು ಅವಕಾಶ ವಿರುವುದಿಲ್ಲ. ಹಾಗೆಯೆ ನಿಗದಿಪಡಿಸಿದ ಕೊನೆಯ ದಿನಾಂಕ:**30.06.2020**ರ ನಂತರ ಶುಲ್ಕವನ್ನು ಪಾವತಿಸಲು ಸಾಧ್ಯವಿರುವುದಿಲ್ಲ.

20) ಮೀಸಲಾತಿ ಅಡಿಯಲ್ಲಿ ಆಯ್ಕೆ ಬಯಸುವ ಅಭ್ಯರ್ಥಿಗಳು ತಪ್ಪಾಗಿ ಪ್ರವರ್ಗವನ್ನು ತುಂಬಿರುವ ಅರ್ಜಿಗಳನ್ನು ಯಾವ ರೀತಿಯಲ್ಲಿ ಪರಿಗಣಿಸಲಾಗುವುದು?

ಉ: ಅಭ್ಯರ್ಥಿಯು ಅರ್ಜಿಯ ಪ್ರವರ್ಗದ ಅಂಕಣವನ್ನು ತಪ್ಪಾಗಿ ನಮೂದಿಸಿದ್ದಲ್ಲಿ ಅದರ ತಿದ್ದುಪಡಿಗೆ ಅವಕಾಶವಿರುವುದಿಲ್ಲ ಮತ್ತು ಅಂತಹ ಅಭ್ಯರ್ಥಿಗಳು ಅರ್ಹತೆ ಹೊಂದಿದಲ್ಲಿ ಸಾಮಾನ್ಯ ವರ್ಗದ ಅಭ್ಯರ್ಥಿಯೆಂದು ಪರಿಗಣಿಸಲಾಗುವುದು.

21) ಮೀಸಲಾತಿಯ ಅಡಿಯಲ್ಲಿ ಆಯ್ಕೆ ಬಯಸಿರುವ ಅಭ್ಯರ್ಥಿಗಳು ಯಾವ ದಿನಾಂಕದ ಪ್ರಮಾಣ ಪತ್ರಗಳನ್ನು ಯಾವ ನಮೂನೆಯಲ್ಲಿ ಪಡೆದಿಟ್ಟುಕೊಂಡಿರಬೇಕು?

ಉ: ಮೀಸಲಾತಿಯ ಅಡಿಯಲ್ಲಿ ಅಯ್ಕೆಯನ್ನು ಬಯಸುವ ಅಭ್ಯರ್ಥಿಗಳು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಸಂಬಂಧಪಟ್ಟ ಪ್ರಾಧಿಕಾರದಿಂದ ಅಧಿಸೂಚನೆಯಲ್ಲಿ ನಮೂದಿಸಿರುವ ನಮೂನೆಯಲ್ಲಿ ಅಥವಾ ಇತ್ತೀಚಿನ ನಮೂನೆಯಲ್ಲಿ ಪಡೆದಿಟ್ಟುಕೊಂಡಿರತಕ್ಕದ್ದು.

22) ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವಾಗ ತಾಂತ್ರಿಕ ದೋಷ ಉಂಟಾದಲ್ಲಿ ಯಾರನ್ನು ಸಂಪರ್ಕಿಸಬೇಕು?

ಉ: ಆನ್‌ಲೈನ್ ಮೂಲಕ ಅರ್ಜಿಯನ್ನು ಭರ್ತಿ ಮಾಡುವ ಸಂದರ್ಭದಲ್ಲಿ ತಾಂತ್ರಿಕ ಅಥವಾ ಬೇರೆ ಸಮಸ್ಯೆಗಳು ಎದುರಾದಲ್ಲಿ ನೇಮಕಾತಿ ಸಮಿತಿಯ ಸಹಾಯವಾಣಿ ಸಂಖ್ಯೆ: 080–22943346ಗೆ ಕರೆ ಮಾಡಿ ಅಗತ್ಯ ಮಾಹಿತಿಯನ್ನು ಪಡೆದು ಅರ್ಜಿ ಸಲ್ಲಿಸಬಹುದಾಗಿದೆ. ಅಥವಾ ಸಮಸ್ಯೆಯು ಸರಿಯಾದ ಪಕ್ಷದಲ್ಲಿ ಆನ್‌ಲೈನ್‌ನಲ್ಲಿ ಭರ್ತಿ ಮಾಡಿರುವ ಮಾಹಿತಿಯು ಲಭ್ಯವಿದ್ದಲ್ಲಿ ಸದರಿ ಅರ್ಜಿಯನ್ನೇ ಮುಂದುವರೆಸಬಹುದು ಅಥವಾ ಹೊಸ ಅರ್ಜಿಯನ್ನು ತೆರೆದು ಮಾಹಿತಿ ಭರ್ತಿ ಮಾಡುವ ಪ್ರಕ್ರಿಯೆಯನ್ನು ಕೈಗೊಳ್ಳುವುದು

23) ಆರ್‌ಎಸ್‌ಐ ಹುದ್ದೆಗೆ ಒಂದಕ್ಕಿಂತ ಹೆಚ್ಚಿನ ಅರ್ಜಿಯನ್ನು ಸಲ್ಲಿಸಬಹುದೇ?

ಉ: ಇಲ್ಲ. ಒಬ್ಬ ಅಭ್ಯರ್ಥಿಯು ಒಂದಕ್ಕಿಂತ ಹೆಚ್ಚಿನ ಅರ್ಜಿಯನ್ನು ಸಲ್ಲಿಸಿದಲ್ಲಿ ಒಂದು ಅರ್ಜಿಯನ್ನು ಮಾತ್ರ ಪರಿಗಣಿಸಿ, ಉಳಿದ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

24) ನಾನು ಅರ್ಹನಿರುವ ಬಗ್ಗೆ ಹೇಗೆ ತಿಳಿದುಕೊಳ್ಳುವುದು?

ಉ: ಅಧಿಸೂಚನೆಯಲ್ಲಿ ನಮೂದಿಸಲಾಗಿರುವ ಷರತ್ತುಗಳನ್ವಯ ಅರ್ಹತೆಯ ಬಗ್ಗೆ ಖಾತರಿಪಡಿಸಿಕೊಳ್ಳಬಹುದು ಹಾಗೂ ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸುವಾಗ ನೀವು ಅರ್ಹರಿರುವ ಬಗ್ಗೆ ಗಣಕಯಂತ್ರವೇ ತಿಳಿಸುತ್ತದೆ. ಅನರ್ಹನಾಗಿದ್ದರೆ ಅರ್ಜಿಯನ್ನು ಸಲ್ಲಿಸಲು ಸಾಧ್ಯವಾಗುವುದಿಲ್ಲ.

24) ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಗೆ ಕರೆಪತ್ರವನ್ನು ಹೇಗೆ ಪಡೆಯಬೇಕು?

ಉ: ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಗೆ ಕರೆಪತ್ರವನ್ನು ಆನ್‌ಲೈನ್ ಮುಖಾಂತರ ಪಡೆಯಬಹುದಾಗಿದೆ. ಪ್ರತ್ಯೇಕವಾಗಿ ಕರೆ ಪತ್ರವನ್ನು ಕಳುಹಿಸಲಾಗುವುದಿಲ್ಲ.

**25) ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಗಳನ್ನು ಹಾಗೂ ಲಿಖಿತ ಪರೀಕ್ಷೆಯನ್ನು ಎಲ್ಲಿ ನಡೆಸಲಾಗುವುದು?**

ಉ: **ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಗಳನ್ನು ಹಾಗೂ ಲಿಖಿತ ಪರೀಕ್ಷೆಯನ್ನು ಸಮಿತಿಯು ನಿರ್ಧಾರಿಸಿದ ಕೇಂದ್ರದಲ್ಲಿ ಮಾತ್ರ ನಡೆಸಲಾಗುವುದು.**

26) ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆ ಎಂದರೇನು ?

ಉ: ಸಹಿಷ್ಣುತೆ ಪರೀಕ್ಷೆಯಲ್ಲಿ ಈ ಕೆಳಕಂಡ ಅಂಶಗಳಿರುತ್ತವೆ. ಆಂಗ್ಲ ಭಾಷೆಯಲ್ಲಿ Endurance Test ಎಂದು ಕರೆಯಲಾಗುವುದು.

**ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಯ ದಿನಾಂಕ, ಸಮಯ ಮತ್ತು ಸ್ಥಳದ ಮಾಹಿತಿಯನ್ನು ಒಳಗೊಂಡ ಕರೆ ಪತ್ರಗಳನ್ನು ಪೊಲೀಸ್ ಇಲಾಖೆಯ ವೆಬ್‌ಸೈಟ್ "http://www.ksp.gov.in" ನಲ್ಲಿ ಅಪ್‌ಲೋಡ್ ಮಾಡಲಾಗುವುದು. ಅಭ್ಯರ್ಥಿಯು ತನ್ನ ಕರೆ ಪತ್ರವನ್ನು ಪೊಲೀಸ್‌ಇಲಾಖೆಯ ವೆಬ್‌ಸೈಟ್‌ನಿಂದ ಡೌನ್‌ಲೋಡ್ ಮಾಡಿಕೊಳ್ಳಬೇಕು. ಅಭ್ಯರ್ಥಿಗಳಿಗೆ ಕರೆ ಪತ್ರಗಳನ್ನು ಅಂಚೆ ಮೂಲಕ ರವಾನಿಸಲಾಗುವುದಿಲ್ಲ. ಆದ್ದರಿಂದ ಅಭ್ಯರ್ಥಿಗಳು ಇಲಾಖೆಯ ವೆಬ್‌ಸೈಟ್‌ನ್ನು ಮೇಲಿಂದ ಮೇಲೆ ವೀಕ್ಷಿಸುತ್ತಿರಬೇಕು. ಕರೆ ಪತ್ರವಿಲ್ಲದೆ ಹಾಜರಾಗುವ ಅಭ್ಯರ್ಥಿಗಳಿಗೆ ಇ.ಟಿ. ಮತ್ತು ಪಿ.ಎಸ್.ಟಿ. ಪರಿಕ್ಷೆಗಳಿಗೆ ಅನುವು ಮಾಡಲಾಗುವುದಿಲ್ಲ.**

ಎ) **ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಯನ್ನು ಆಯ್ಕೆ ಸಮಿತಿಯು ನಿಗದಿಪಡಿಸಿದ ಕೇಂದ್ರಗಳಲ್ಲಿ ನಡೆಸಲಾಗುವುದು.**
ಆಯ್ಕೆ ಸಮಿತಿಯು ಪರೀಕ್ಷಾ ಕೇಂದ್ರವನ್ನು ರದ್ದುಪಡಿಸುವ ಅಥವಾ ಹೊಸದಾಗಿ ಸೇರಿಸುವ ಹಕ್ಕನ್ನು ಕಾಯ್ದಿರಿಸಿಕೊಂಡಿರುತ್ತದೆ ಇದನ್ನು ಇಲಾಖೆಯ ಅಧಿಕೃತ ವೆಬ್‌ಸೈಟ್‌ನಲ್ಲಿ ತಿಳಿಸಲಾಗುವುದು. ಎಲ್ಲಿಯೇ ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಯನ್ನು ನಡೆಸಿದರೂ ಅಭ್ಯರ್ಥಿಗಳು ಸದರಿ ಪರೀಕ್ಷೆಗೆ ಹಾಜರಾಗತಕ್ಕದ್ದು, ಇಲ್ಲದಿದ್ದಲ್ಲಿ ಗೈರುಹಾಜರು/ಅನರ್ಹಗೊಳಿಸಲಾಗುವುದು.

ಬಿ) **ಒಂದಕ್ಕಿಂತ ಹೆಚ್ಚು ಅರ್ಜಿ ಸಲ್ಲಿಸಿ ಒಂದಕ್ಕಿಂತ ಹೆಚ್ಚು ಕಡೆಗಳಲ್ಲಿ ದೈಹಿಕ ಪರೀಕ್ಷೆಗಳಿಗೆ ಹಾಜರಾದರೆ, ಅಂತಹ ಅಭ್ಯರ್ಥಿಯ ಅಭ್ಯರ್ಥಿತನವನ್ನು ರದ್ದುಪಡಿಸಲಾಗುವುದು. (ವಿಶೇಷ ಸೂಚನೆಗಳು 17(ಸಿ)ನ್ನು ನೋಡಿ) ಆಯ್ಕೆ ಸಮಿತಿಯ ತೀರ್ಮಾನವೇ ಅಂತಿಮವಾಗಿರುತ್ತದೆ.**

ಸಿ) **ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಯ ದಿನಾಂಕ ಮತ್ತು ಸಮಯದ ಮಾಹಿತಿಯನ್ನು ಒಳಗೊಂಡ ಕರೆ ಪತ್ರಗಳನ್ನು ಅಧಿಕೃತ ವೆಬ್‌ಸೈಟ್ www.ksp.gov.inನಲ್ಲಿ ಪ್ರಕಟಿಸಲಾಗುವುದರಿಂದ** ಅಭ್ಯರ್ಥಿಗಳು ಸದರಿ ವೆಬ್‌ಸೈಟ್‌ನಿಂದ ಕರೆ ಪತ್ರಗಳನ್ನು ಕಡ್ಡಾಯವಾಗಿ ಪಡೆದುಕೊಳ್ಳತಕ್ಕದ್ದು (Download). ಈ ಸಂಬಂಧ ಅಭ್ಯರ್ಥಿಗಳು ಮುಖ್ಯವಾಗಿ ಈ ಕಛೇರಿಯ ಅಧಿಕೃತ ವೆಬ್‌ಸೈಟ್ www.ksp.gov.inನ್ನು ದಿನನಿತ್ಯ ಗಮನಿಸುತ್ತಿರುವುದು ಸೂಕ್ತ. ದೈಹಿಕ ಪರೀಕ್ಷೆಯು ನಡೆಯುವ ಸಮಯ ಮತ್ತು ಸ್ಥಳವನ್ನು ಸಂಬಂಧಪಟ್ಟ ದೈಹಿಕ ಪರೀಕ್ಷೆಯ ಕೇಂದ್ರದ ಸೂಚನಾ ಫಲಕದಲ್ಲಿಯೂ ಸಹ ಪ್ರಕಟಿಸಲಾಗುವುದು. ಕರೆ ಪತ್ರವನ್ನು ಪಡೆಯದೆ ಪರೀಕ್ಷೆಗೆ ಹಾಜರಾದಲ್ಲಿ ಅಂತಹವರಿಗೆ ದೈಹಿಕ ಪರೀಕ್ಷೆಯಲ್ಲಿ ಭಾಗವಹಿಸಲು ಅವಕಾಶ ನೀಡಲಾಗುವುದಿಲ್ಲ.

ಅಭ್ಯರ್ಥಿಗಳು ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಗೆ ಹಾಜರಾಗುವಾಗ, ಕರೆಪತ್ರದ ಜೊತೆಗೆ ಈ ಕೆಳಕಂಡ ಯಾವುದಾದರೊಂದು ಗುರುತಿನ ಚೀಟಿಯನ್ನು ಕಡ್ಡಾಯವಾಗಿ ಹಾಜರುಪಡಿಸತಕ್ಕದ್ದು ಮತ್ತು ಅದರ ಒಂದು ದೃಢೀಕೃತ ಪ್ರತಿಯನ್ನು ನೀಡುವುದು.

i) ಪಾಸ್‌ಪೋರ್ಟ್ (Passport)
ii) ಚಾಲನಾ ಪರವಾನಗಿ ಪತ್ರ (Driving License)
iii) ಪ್ಯಾನ್ ಕಾರ್ಡ್ (PAN Card)
iv) ರಾಜ್ಯ ಸರ್ಕಾರ/ ಕೇಂದ್ರ ಸರ್ಕಾರ / ಸಾರ್ವಜನಿಕ ಸ್ವಾಮ್ಯದ ಅಥವಾ ಸರ್ಕಾರದ ಅಧೀನಕ್ಕೊಳಪಟ್ಟ ಖಾಸಗೀ ಕಂಪನಿಗಳು ವಿತರಿಸಿರುವ ಭಾವಚಿತ್ರವಿರುವ ಸೇವಾ ಗುರುತಿನ ಚೀಟಿ (Service ID Card)
v) ಸಾರ್ವಜನಿಕ ಬ್ಯಾಂಕುಗಳು / ಅಂಚೆ ಕಛೇರಿಗಳು ವಿತರಿಸಿರುವ ಭಾವಚಿತ್ರವಿರುವ ಪಾಸ್ ಪುಸ್ತಕ (Bank Pass Book with Photograph)
vi) ಭಾವಚಿತ್ರ ಸಮೇತ ನೋಂದಣಿಯಾಗಿರುವ ಸ್ವತ್ತಿನ ದಾಖಲೆಪತ್ರ ಅಥವಾ ಪಟ್ಟಾ ಪುಸ್ತಕ (Pattas and registered deeds with Photograph)

vii) ಭಾವಚಿತ್ರ ಸಮೇತ ಸಂಬಂಧಪಟ್ಟ ಪ್ರಾಧಿಕಾರಿಯವರು ವಿತರಿಸಿರುವ ಜಾತಿ ಪ್ರಮಾಣ ಪತ್ರ (Community Certificate with Photo)

viii) ಮಾಜಿ ಸೈನಿಕ ಅಭ್ಯರ್ಥಿಗಳಿಗೆ ವಿತರಿಸಿರುವ ಪಿಂಚಣಿ ಪುಸ್ತಕ / ಪಿಂಚಣಿ ಮಂಜೂರಾತಿ ಆಗಿರುವ ಆದೇಶ (Ex-servicemen's pension book/pension payment order)

ix) ಎನ್.ಆರ್.ಇ.ಜಿ.ಎಸ್.ಯಿಂದ ನೀಡಿದ ಭಾವಚಿತ್ರವಿರುವ ಉದ್ಯೋಗ ಚೀಟಿ. (Job cards with Photograph)

x) ಎಲೆಕ್ಟೋರಲ್ ಫೋಟೋ ಗುರುತಿನ ಚೀಟಿ (EPIC).

xi) ಭಾರತೀಯ ಗುರುತು ಪ್ರಾಧಿಕಾರದಿಂದ ನೀಡಲಾಗಿರುವ ಆಧಾರ್ ಕಾರ್ಡ್.(AADHAR CARD).

ಕರೆಪತ್ರದ ಜೊತೆಗೆ ಆನ್‌ಲೈನ್ ಅರ್ಜಿಯ ಜೆರಾಕ್ಸ್ ಪ್ರತಿಯನ್ನು ಸಹ ತರತಕ್ಕದ್ದು, ತಪ್ಪಿದ್ದಲ್ಲಿ ಪರೀಕ್ಷೆಗೆ ಹಾಜರಾಗಲು ಅನುಮತಿ ನೀಡಲಾಗುವುದಿಲ್ಲ. ನಿಗದಿತ ದಿನಾಂಕ ಹಾಗೂ ಸಮಯದಲ್ಲಿ ಹಾಜರಾಗದಿದ್ದರೆ ಅಂತಹವರನ್ನು ಅನರ್ಹಗೊಳಿಸಲಾಗುವುದು ಹಾಗೂ ಬದಲಿ ದಿನಾಂಕವನ್ನು ನೀಡಲಾಗುವುದಿಲ್ಲ.

ಸಿ) **ಸಹಿಷ್ಣುತೆ ಪರೀಕ್ಷೆ: (Endurance Test)**

i) ದೇಹದಾರ್ಢ್ಯತೆ ಪರೀಕ್ಷೆಗೆ ಅರ್ಹರಾಗಲು ಅಭ್ಯರ್ಥಿಗಳು ಈ ಕೆಳಗಿನ ಎಲ್ಲಾ ಸಹಿಷ್ಣುತೆ ಪರೀಕ್ಷೆಗಳಲ್ಲಿ ಉತ್ತೀರ್ಣರಾಗಬೇಕು ಹಾಗೂ ಈ ಕೆಳಗಿನ ಎಲ್ಲಾ ಸಹಿಷ್ಣುತೆ ಪರೀಕ್ಷೆಗಳನ್ನು ಕೆಳಗೆ ನಮೂದಿಸಿರುವ ಕ್ರಮದಲ್ಲಿಯೇ ಭಾಗವಹಿಸುವುದು ಕಡ್ಡಾಯವಾಗಿರುತ್ತದೆ. ಈ ಪರೀಕ್ಷೆಗಳಲ್ಲಿ ಭಾಗವಹಿಸದೆ ತಿರಸ್ಕರಿಸುವವರು/ ವಿಫಲವಾಗುವರು, ಅನರ್ಹತೆಗೆ ಒಳಗಾಗುವರು. ಪ್ರತಿಯೊಂದು ಸಹಿಷ್ಣುತೆ ಪರೀಕ್ಷೆ ಮುಗಿದ ನಂತರ ನಿಗದಿತ ನಮೂನೆಗೆ ಅಭ್ಯರ್ಥಿಯು ಭರ್ತಿ ಮಾಡಿರುವ ವಿವರಗಳನ್ನು ಪರಿಶೀಲಿಸಿ ಸಹಿ ಹಾಕಬೇಕು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಯು ಅನರ್ಹತೆಗೊಳಗಾಗುವನು. ಸಹಿಷ್ಣುತೆ ಪರೀಕ್ಷೆಗೆ ಅಂಕಗಳನ್ನು ನೀಡಲಾಗುವುದಿಲ್ಲ. ಇವು ಕೇವಲ ಅರ್ಹತೆಗೆ ಮಾತ್ರ ಸೀಮಿತವಾಗಿರುತ್ತವೆ.

ii) ಅಭ್ಯರ್ಥಿಗಳು 1600 ಮೀಟರ್ ಓಟವನ್ನು 6 ನಿಮಿಷ 30 ಸೆಕೆಂಡ್‌ಗಳೊಳಗಾಗಿ ಹಾಗೂ ಸೇವಾನಿರತ ಮತ್ತು ಮಾಜಿ ಸೈನಿಕ ಅಭ್ಯರ್ಥಿಗಳು 400 ಮೀಟರ್ ಓಟವನ್ನು 2 ನಿಮಿಷದೊಳಗಾಗಿ ಪೂರ್ಣಗೊಳಿಸಿದರೆ ಮಾತ್ರ ಮುಂದಿನ ಸಹಿಷ್ಣುತೆ ಪರೀಕ್ಷೆಗೆ ಅರ್ಹಗೊಳ್ಳುವರು. ಇಲ್ಲದಿದ್ದಲ್ಲಿ ಅಂತಹ ಅಭ್ಯರ್ಥಿಗಳನ್ನು ಆ ಹಂತದಲ್ಲಿಯೇ ಅನರ್ಹಗೊಳಿಸಲಾಗುವುದು.

iii) ಸಹಿಷ್ಣುತೆ ಪರೀಕ್ಷೆಯಲ್ಲಿ ಎತ್ತರ ಜಿಗಿತ ಅಥವಾ ಉದ್ದ ಜಿಗಿತ ಹಾಗೂ ಗುಂಡೆಸತದಲ್ಲಿ ಮಾತ್ರ ಮೂರು ಅವಕಾಶಗಳನ್ನು ನೀಡಲಾಗುವುದು. ಮೂರು ಅವಕಾಶಗಳಲ್ಲಿ ಉತ್ತಮವಾದ ಒಂದನ್ನು ಮಾತ್ರ ಗಣನೆಗೆ ತೆಗೆದು ಕೊಳ್ಳಲಾಗುವುದು.

**ಎಲ್ಲಾ ಸಾಮಾನ್ಯ ಪುರುಷ ಅಭ್ಯರ್ಥಿಗಳಿಗೆ (ಸೇವಾನಿರತ/ಮಾಜಿ ಸೈನಿಕರನ್ನು ಹೊರತುಪಡಿಸಿ)**

| ಅಂಶಗಳು | ಅರ್ಹತಾ ವೇಳೆ |
|---|---|
| 1600 ಮೀಟರ್ ಓಟ | 6 ನಿಮಿಷ 30 ಸೆಕೆಂಡ್ ಮೀರದಂತೆ |
| ಉದ್ದ ಜಿಗಿತ<br>ಅಥವಾ<br>ಎತ್ತರ ಜಿಗಿತ | 3.80 ಮೀಟರ್‌ಗಿಂತ ಕಡಿಮೆ ಇಲ್ಲದಂತೆ<br>(3 ಅವಕಾಶಗಳು ಮಾತ್ರ)<br>ಅಥವಾ<br>1.20 ಮೀಟರ್‌ಗಿಂತ ಕಡಿಮೆ ಇಲ್ಲದಂತೆ<br>(3 ಅವಕಾಶಗಳು ಮಾತ್ರ) |
| ಗುಂಡು ಎಸೆತ (7.26 ಕೆ.ಜಿ.) | 5.60 ಮೀಟರ್‌ಗಿಂತ ಕಡಿಮೆ ಇಲ್ಲದಂತೆ<br>(3 ಅವಕಾಶಗಳು ಮಾತ್ರ) |

**<u>ಸೇವಾನಿರತ ಮತ್ತು ಮಾಜಿ ಸೈನಿಕ ಅಭ್ಯರ್ಥಿಗಳಿಗೆ ಈ ಕೆಳಕಂಡ ಸಹಿಷ್ಣುತೆ ಪರೀಕ್ಷೆಯನ್ನು ನಡೆಸಲಾಗುವುದು</u>**

| ಅಂಶಗಳು | ಅರ್ಹತಾ ವೇಳೆ |
|---|---|
| 400 ಮೀಟರ್ ಓಟ | 2 ನಿಮಿಷಮೀರದಂತೆ |
| ಉದ್ದ ಜಿಗಿತ<br>ಅಥವಾ<br>ಎತ್ತರ ಜಿಗಿತ | 2.50 ಮೀಟರ್‌ಗಿಂತ ಕಡಿಮೆ ಇಲ್ಲದಂತೆ<br>(3 ಅವಕಾಶಗಳು ಮಾತ್ರ)<br><u>ಅಥವಾ</u><br>0.90 ಮೀಟರ್‌ಗಿಂತ ಕಡಿಮೆ ಇಲ್ಲದಂತೆ<br>(3 ಅವಕಾಶಗಳು ಮಾತ್ರ) |
| ಗುಂಡು ಎಸೆತ (4 ಕೆ.ಜಿ.) | 3.75 ಮೀಟರ್‌ಗಿಂತ ಕಡಿಮೆ ಇಲ್ಲದಂತೆ<br>(3 ಅವಕಾಶಗಳು ಮಾತ್ರ) |

**<u>ಇ) ದೇಹದಾರ್ಢ್ಯತೆ ಪರೀಕ್ಷೆ</u>:** (ಸಹಿಷ್ಣುತೆ ಪರೀಕ್ಷೆಯಲ್ಲಿ ಅರ್ಹಗೊಂಡ ಅಭ್ಯರ್ಥಿಗಳಿಗೆ ಮಾತ್ರ)

**ಎಲ್ಲಾ ನೇರ ಅಭ್ಯರ್ಥಿಗಳಿಗೆ, ಸೇವಾನಿರತ ಮತ್ತು ಮಾಜಿ ಸೈನಿಕ ಅಭ್ಯರ್ಥಿಗಳಿಗೆ ಅನ್ವಯಿಸುವಂತೆ**

ಎತ್ತರ : ಕನಿಷ್ಠ 168 ಸೆಂ.ಮೀ.

ಎದೆ ಸುತ್ತಳತೆ : 86 ಸೆಂ.ಮೀ. (ಪೂರ್ತಿ ವಿಸ್ತರಿಸಿದಾಗ) ಕನಿಷ್ಠವಿಸ್ತರಣೆ 5 ಸೆಂ.ಮೀ.

**ಟಿಪ್ಪಣಿ: ವೃಂದ ಮತ್ತು ನೇಮಕಾತಿ ನಿಯಮಾನುಸಾರ ನಿಗದಿಪಡಿಸಿರುವ ಕನಿಷ್ಟ ಎತ್ತರ 168 ಸೆಂ.ಮೀ ಹೊಂದಿರುವ ಮಾಜಿ ಸೈನಿಕ ಅಭ್ಯರ್ಥಿಗಳು ಲಭ್ಯವಿಲ್ಲದಿರುವ ಪಕ್ಷದಲ್ಲಿ ಮಾತ್ರ ಕಡಿಮೆ ಎತ್ತರ ಹೊಂದಿರುವ ಮಾಜಿ ಸೈನಿಕ ಅಭ್ಯರ್ಥಿಗಳನ್ನು ಆಯ್ಕೆಗೆ ಪರಿಗಣಿಸಲು ಅವಕಾಶವಿರುವುದರಿಂದ ಅರ್ಜಿ ಸಲ್ಲಿಸಿರುವ ಎಲ್ಲಾ ಅರ್ಹ ಮಾಜಿ ಸೈನಿಕ ಅಭ್ಯರ್ಥಿಗಳಿಗೆ ಸಹಿಷ್ಣತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಗೆ ಅವಕಾಶ ಕಲ್ಪಿಸಲಾಗುವುದು.**

**<u>ವಿಶೇಷ ಸೂಚನೆ</u> :-**

**ಸಹಿಷ್ಣುತೆ ಪರೀಕ್ಷೆಗೆ ಹಾಜರಾಗುವ ಮುನ್ನ ಅಭ್ಯರ್ಥಿಗಳು ದೈಹಿಕವಾಗಿ ಸದೃಢರಿರಬೇಕು. ಈ ಪರೀಕ್ಷೆಗಳ ಸಂದರ್ಭದಲ್ಲಿ ಸಂಭವಿಸುವ ಯಾವುದೇ ರೀತಿಯ ಅನಾಹುತ / ತೊಂದರೆಗಳಿಗೆ ಪೊಲೀಸ್ ಇಲಾಖೆ/ ನೇಮಕಾತಿ ಸಮಿತಿಯವರು ಜವಾಬ್ದಾರರಾಗಿರುವುದಿಲ್ಲ. ಅಭ್ಯರ್ಥಿಗಳು ಅವರ ಸ್ವಂತ ಹಿತದೃಷ್ಠಿಯಿಂದ ಅವರ ದೇಹದ ವೈದ್ಯಕೀಯ ಪರೀಕ್ಷೆಯನ್ನು ಮಾಡಿಸಿಕೊಂಡು, ಅಭ್ಯರ್ಥಿಯ ಆರೋಗ್ಯವು ಎಲ್ಲ ರೀತಿಯಿಂದಲೂ ಸದೃಢವಾಗಿದೆ ಎಂದು ಖಚಿತ ಪಡಿಸಿಕೊಂಡು ಇಲಾಖೆ ನಡೆಸುವ ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಗೆ ಎಲ್ಲ ವಿಧದಿಂದಲೂ ಅರ್ಹನೆಂದು ಮುಂಚಿತವಾಗಿಯೇ ತಿಳಿದುಕೊಂಡು ಹಾಜರಾಗತಕ್ಕದ್ದು. ಈ ದಿಸೆಯಲ್ಲಿ ಕನಿಷ್ಠ ಒಂದು ತಿಂಗಳ ಮುಂಚೆಯಿಂದಲೇ ಸಹಿಷ್ಣುತೆ ಪರೀಕ್ಷೆಗೆ ಅಭ್ಯರ್ಥಿಗಳು ಸಾಕಷ್ಟು ಅಭ್ಯಾಸ ಮಾಡಿಕೊಳ್ಳತಕ್ಕದ್ದು. ಸಹಿಷ್ಣುತೆ ಪರೀಕ್ಷೆಯಲ್ಲಿ ಯಾವ ಅನಾಹುತಗಳಿಗೂ ಇಲಾಖೆ ಜವಾಬ್ದಾರರಾಗುವುದಿಲ್ಲ. ಈ ಪರೀಕ್ಷೆಗಳಿಗೆ ಅಭ್ಯರ್ಥಿಗಳು ತಮ್ಮ ಸ್ವಂತ ಜವಾಬ್ದಾರಿ ಹಾಗೂ ಸ್ವಇಚ್ಛೆಯಿಂದ ಭಾಗವಹಿಸುವುದು.**

**ಟಿಪ್ಪಣಿ :**

i) ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಯನ್ನು ಒಂದು ದೈಹಿಕ ಪರೀಕ್ಷೆಯ ಸಮಿತಿಯು ನಡೆಸುತ್ತದೆ. ಯಾವುದೇ ಇತರೆ ವೈದ್ಯಕೀಯ ಪ್ರಮಾಣ ಪತ್ರದ ಆಧಾರದ ಮೇಲೆ ಪರಿಗಣಿಸಲಾಗುವುದಿಲ್ಲ ದೈಹಿಕ ಪರೀಕ್ಷೆಯ ಸಮಿತಿಯು ನೀಡುವ ಫಲಿತಾಂಶವೇ ಅಂತಿಮವಾಗಿರುತ್ತದೆ.

ii) ಅಭ್ಯರ್ಥಿಗಳು ಮೇಲ್ಕಂಡ ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಗಳಲ್ಲಿ ಅರ್ಹರಾಗಿದ್ದರೂ ಸಹ ಪೊಲೀಸ್ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುವ ಸಿಬ್ಬಂದಿಯು ಶಾರೀರಿಕವಾಗಿ ಸದೃಢರಾಗಿರಬೇಕಾಗಿರುತ್ತದೆ. ಆದ್ದರಿಂದ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸಲು ಅಡ್ಡಿಪಡಿಸುವಂತಹ ಯಾವುದೇ ದೈಹಿಕ ನ್ಯೂನತೆಗಳನ್ನು / ಅಂಗವೈಕಲ್ಯಗಳನ್ನು ಹೊಂದಿರಬಾರದು.

iii) ಸಹಿಷ್ಣತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆ ಪೂರ್ಣಗೊಂಡ ನಂತರ ಅಭ್ಯರ್ಥಿಗಳು ದೈಹಿಕ ಪರೀಕ್ಷೆ ಸಮಿತಿ ಸಮ್ಮುಖದಲ್ಲಿ ನಿಗದಿತ ನಮೂನೆಗೆ ಸಹಿ ಮತ್ತು ಎಡಗೈ ಹೆಬ್ಬೆಟ್ಟಿನ ಗುರುತು ಹಾಕಬೇಕು. ಇಲ್ಲವಾದರೆ ಅಂತಹವರನ್ನು ಅನರ್ಹರೆಂದು ಪರಿಗಣಿಸಲಾಗುವುದು.

iv) ಅಭ್ಯರ್ಥಿಗಳು ಸಹಿಷ್ಣುತೆ ಪರೀಕ್ಷೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಯಲ್ಲಿ ಅರ್ಹಗೊಂಡಲ್ಲಿ ಮಾತ್ರ ಲಿಖಿತ ಪರೀಕ್ಷೆಗೆ ಅರ್ಹಗೊಳ್ಳುವರು.

v) ನಿಗದಿಪಡಿಸಿರುವ ಕನಿಷ್ಠ ಎತ್ತರ 168 ಸೆಂ.ಮೀ. ಹೊಂದಿರುವ ಮಾಜಿ ಸೈನಿಕ ಅಭ್ಯರ್ಥಿಗಳು ಲಭ್ಯವಿಲ್ಲದೆ ಇರುವ ಪಕ್ಷದಲ್ಲಿ ಕಡಿಮೆ ಎತ್ತರ ಹೊಂದಿರುವ ಮಾಜಿ ಸೈನಿಕ ಅಭ್ಯರ್ಥಿಗಳನ್ನು ಸಹ ಅರ್ಹತೆಗೆ ಅನುಗುಣವಾಗಿ ಅಂತಿಮ ಆಯ್ಕೆಗೆ ಪರಿಗಣಿಸಲಾಗುವುದು.

vi) ಪಾರದರ್ಶಕತೆಗಾಗಿ ಮೇಲೆ ಹೇಳಿದ ಎಲ್ಲಾ ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಯನ್ನು ವೀಡಿಯೋಗ್ರಫಿ ಅಥವಾ CCTV Camera ಗಳಲ್ಲಿ ಸೆರೆಹಿಡಿಯಲಾಗುವುದು.

**27)** ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಗೆ ವಿಶೇಷ ಸೂಚನೆ ಏನು?

ಉ: ವಿಶೇಷ ಸೂಚನೆ :–

ಸಹಿಷ್ಣುತೆ ಪರೀಕ್ಷೆಗೆ ಹಾಜರಾಗುವ ಮುನ್ನ ಅಭ್ಯರ್ಥಿಗಳು ದೈಹಿಕವಾಗಿ ಸದೃಢರಿರಬೇಕು. ಈ ಪರೀಕ್ಷೆಗಳ ಸಂದರ್ಭದಲ್ಲಿ ಸಂಭವಿಸುವ ಯಾವುದೇ ರೀತಿಯ ಅನಾಹುತ/ತೊಂದರೆಗಳಿಗೆ ಪೊಲೀಸ್ ಇಲಾಖೆ/ನೇಮಕಾತಿ ಸಮಿತಿಯವರು ಜವಾಬ್ದಾರರಾಗಿರುವುದಿಲ್ಲ. ಅಭ್ಯರ್ಥಿಗಳು ಅವರ ಸ್ವಂತ ಹಿತದೃಷ್ಠಿಯಿಂದ ಅವರ ದೇಹದ ವೈದ್ಯಕೀಯ ಪರೀಕ್ಷೆಯನ್ನು ಮಾಡಿಸಿಕೊಂಡು, ಅಭ್ಯರ್ಥಿಯ ಆರೋಗ್ಯವು ಎಲ್ಲಾ ರೀತಿಯಿಂದಲೂ ಸದೃಢವಾಗಿದೆ ಎಂದು ಖಚಿತ ಪಡಿಸಿಕೊಂಡು ಇಲಾಖೆ ನಡೆಸುವ ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಗೆ ಎಲ್ಲ ವಿಧದಿಂದಲೂ ಅರ್ಹನೆಂದು ಮುಂಚಿತವಾಗಿಯೇ ತಿಳಿದುಕೊಂಡು ಹಾಜರಾಗತಕ್ಕದ್ದು. ಈ ದಿಸೆಯಲ್ಲಿ ಕನಿಷ್ಠ ಒಂದು ತಿಂಗಳ ಮುಂಚೆಯಿಂದಲೇ ಸಹಿಷ್ಣುತೆ ಪರೀಕ್ಷೆಗೆ ಅಭ್ಯರ್ಥಿಗಳು ಸಾಕಷ್ಟು ಅಭ್ಯಾಸ ಮಾಡಿಕೊಳ್ಳತಕ್ಕದ್ದು.

28) ಸಶಸ್ತ್ರ ಮೀಸಲು ಪೊಲೀಸ್ ಸಬ್–ಇನ್ಸ್‌ಪೆಕ್ಟರ್ (ಆರ್‌ಎಸ್‌ಐ) (/ಡಿಎಆರ್) ಹುದ್ದೆಗಳಿಗೆ ನಿಗದಿಪಡಿಸಿರುವ ಎತ್ತರವೆಷ್ಟು ?

ಉ: ಎಲ್ಲಾ ಪುರುಷ ಅಭ್ಯರ್ಥಿಗಳಿಗೆ ಕನಿಷ್ಠ 168 ಸೆಂ.ಮೀಟರ್ ಎತ್ತರವನ್ನು ನಿಗದಿಪಡಿಸಲಾಗಿದೆ.

29) ದೈಹಿಕ ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಯನ್ನು ಯಾರು ನಡೆಸುತ್ತಾರೆ?

ಉ: ದೈಹಿಕ ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಯನ್ನು ಡಿಜಿ ಮತ್ತು ಐಜಿಪಿ ರವರಿಂದ ನಾಮನಿರ್ದೇಶಿಸಲ್ಪಟ್ಟ ಐಜಿಪಿ / ಡಿಐಜಿಪಿ ದರ್ಜೆಯ ಅಧಿಕಾರಿಗಳ ನೇತೃತ್ವದಲ್ಲಿ ರಚಿಸಲ್ಪಟ್ಟ ಸಮಿತಿಯು ನಡೆಸುತ್ತದೆ.

30). ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಯಲ್ಲಿ ಅನುತ್ತೀರ್ಣರಾದವರು ಮೇಲ್ಮನವಿ ಸಲ್ಲಿಸಲು ಅವಕಾಶವಿದೆಯೇ?

ಉ: ಇಲ್ಲ. ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಯಲ್ಲಿ ಅನುತ್ತೀರ್ಣರಾದ ಅಭ್ಯರ್ಥಿಗಳು ಮೇಲ್ಮನವಿ ಸಲ್ಲಿಸಲು ಅವಕಾಶವಿಲ್ಲ. ನೇಮಕಾತಿ ಸಮಿತಿಯು ನಡೆಸುವ ಪರೀಕ್ಷೆಯೇ ಅಂತಿಮವಾಗಿದ್ದು, ಇತರೆ ವೈದ್ಯಾಧಿಕಾರಿಗಳು ನೀಡುವ ಪ್ರಮಾಣ ಪತ್ರಗಳನ್ನು ಗಣನೆಗೆ ತೆಗೆದುಕೊಳ್ಳಲಾಗುವುದಿಲ್ಲ.

31). ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಗೆ ಅಂಕಗಳನ್ನು ನೀಡಲಾಗುತ್ತದೆಯೇ?

ಉ: ಇಲ್ಲ. ಈ ಪರೀಕ್ಷೆಯನ್ನು ಕೇವಲ ಮುಂದಿನ ಪ್ರಕ್ರಿಯೆಗೆ ಭಾಗವಹಿಸಲು ಅರ್ಹತೆಯನ್ನು ಪಡೆಯಲು ಮಾತ್ರ ನಡೆಸಲಾಗುವುದು.

32) ಸಹಿಷ್ಣುತೆ ಪರೀಕ್ಷೆಯನ್ನು ಯಾವ ಕ್ರಮದಲ್ಲಿಯಾದರೂ ಮಾಡಬಹುದೇ?

ಉ: ಇಲ್ಲ. ಇದನ್ನು ಇಲಾಖೆಯು ನಿಗದಿಪಡಿಸಿರುವ ಕ್ರಮದಲ್ಲಿ ಅಂದರೆ ಪುರುಷರಿಗೆ 1600ಮೀ. ಮತ್ತು ಸೇವಾನಿರತ ಮತ್ತು ಮಾಜಿಸೈನಿಕರಿಗೆ 400 ಮೀ ಓಟದ ನಂತರ ಉದ್ದ ಜಿಗಿತ ಅಥವಾ ಎತ್ತರ ಜಿಗಿತ ಮತ್ತು ಗುಂಡು ಎಸೆತಗಳನ್ನು ಕ್ರಮದಲ್ಲಿಯೇ ಮಾಡಬೇಕಾಗಿರುತ್ತದೆ.

33) ದೇಹದಾರ್ಢ್ಯತೆ / ವೈದ್ಯಕೀಯ ಪರೀಕ್ಷೆಯಲ್ಲಿ ಅನುತ್ತೀರ್ಣನಾದರೆ ಇತರೆ ವೈದ್ಯರಿಂದ ಪ್ರಮಾಣ ಪತ್ರ ಪಡೆದು ನೀಡಬಹುದೇ?

ಉ: ಇಲ್ಲ. ಇತರೆ ಯಾವುದೇ ವೈದ್ಯರಿಂದ ಪಡೆದ ಪ್ರಮಾಣ ಪತ್ರಗಳನ್ನು ಪರಿಗಣಿಸಲಾಗುವುದಿಲ್ಲ. ನೇಮಕಾತಿ ಸಮಿತಿಯಿಂದ ನಿರ್ದೇಶಿಸಲ್ಪಟ್ಟಿರುವ ಅಧಿಕಾರಿಗಳು ತಪಾಸಣೆಯ ನಂತರ ನೀಡಲಾಗುವ ಪ್ರಮಾಣ ಪತ್ರವನ್ನು ಮಾತ್ರ ಪರಿಗಣಿಸಲಾಗುವುದು ಹಾಗೂ ವೈದ್ಯಕೀಯ ಮಂಡಳಿಯ ಮುಂದೆ ವೈದ್ಯಕೀಯ ಪರೀಕ್ಷೆಯನ್ನು ನಡೆಸಲಾಗುತ್ತಿದ್ದು, ವೈದ್ಯಕೀಯ ಮಂಡಳಿಯು ನೀಡುವ ಪ್ರಮಾಣ ಪತ್ರವೇ ಅಂತಿಮವಾಗಿರುತ್ತದೆ.

34). ನಿಗದಿಗೊಳಿಸಿದ ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಯಲ್ಲಿ ಅನುತ್ತೀರ್ಣರಾದರೆ ಲಿಖಿತ ಪರೀಕ್ಷೆಗೆ ಅರ್ಹರೇ?

ಉ: ಅಭ್ಯರ್ಥಿಯು ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಯಲ್ಲಿ ಅನುತ್ತೀರ್ಣರಾದರೆ ಲಿಖಿತ ಪರೀಕ್ಷೆಗೆ ಅನರ್ಹನೆಂದು ಪರಿಗಣಿಸಲಾಗುವುದು ಮತ್ತು ಮುಂದೆ ನಡೆಯುವ ಯಾವುದೇ ನೇಮಕಾತಿ ಪ್ರಕ್ರಿಯೆಯಲ್ಲಿ ಭಾಗವಹಿಸುವಂತಿಲ್ಲ.

35). BMI ಎಂದರೇನು ?

ಉ: BMI ಎಂದರೆ Body Mass Index ಎಂದು. ಬಿಎಮ್‌ಐ ಯಂತ್ರದಿಂದ ದೇಹದಾರ್ಢ್ಯತೆ ಪರೀಕ್ಷೆಯ ಎತ್ತರ ಹಾಗೂ ತೂಕವನ್ನು ಅಳತೆ ಮಾಡಲಾಗುವುದು.

36) ಲಿಖಿತ ಪರೀಕ್ಷೆಗೆ ಅರ್ಹನಾಗಲು ಹೊಂದಿರಬೇಕಾದ ಅರ್ಹತೆಗಳೇನು? ಲಿಖಿತ ಪರೀಕ್ಷೆಗೆ ತರಬೇಕಾದ ದಾಖಲೆಗಳೇನು?

ಉ: ಸಹಿಷ್ಣುತೆ ಪರೀಕ್ಷೆ ಹಾಗೂ ದೇಹದಾರ್ಢ್ಯತೆ ಪರೀಕ್ಷೆಗಳಲ್ಲಿ ಉತ್ತೀರ್ಣರಾದಲ್ಲಿ ಮಾತ್ರ ಲಿಖಿತ ಪರೀಕ್ಷೆಗೆ ಅರ್ಹತೆಯನ್ನು ಪಡೆಯುತ್ತಾರೆ ಮತ್ತು ಸದರಿ ಪರೀಕ್ಷೆಗೆ ಹಾಜರಾಗಲು 1) ಲಿಖಿತ ಪರೀಕ್ಷೆಯ ಕರೆಪತ್ರ. 2) ಸಹಿಷ್ಣುತೆ ಮತ್ತು ದೇಹದಾಢ್ಯತೆ ಪರೀಕ್ಷೆಯ ಫಲಿತಾಂಶ ಹಾಳೆ ಮತ್ತು 3) ಗುರುತಿನ ಚೀಟಿಯನ್ನು ತರತಕ್ಕದ್ದು, ತಪ್ಪಿದಲ್ಲಿ ಲಿಖಿತ ಪರೀಕ್ಷೆಗೆ ಹಾಜರಾಗಲು ಅನುಮತಿ ನೀಡಲಾಗುವುದಿಲ್ಲ.

37). ಲಿಖಿತ ಪರೀಕ್ಷೆಯ ಪ್ರಶ್ನೆ ಪತ್ರಿಕೆಯು ಯಾವ ಭಾಷೆಯಲ್ಲಿ ಇರುತ್ತದೆ ?

ಉ: ಲಿಖಿತ ಪರೀಕ್ಷೆಯ ಪ್ರಶ್ನೆ ಪತ್ರಿಕೆಯು ಕನ್ನಡ & ಆಂಗ್ಲ ಭಾಷೆಯಲ್ಲಿ ಇರುತ್ತದೆ.

38). ಲಿಖಿತ ಪರೀಕ್ಷೆಯನ್ನು ಯಾವ ಭಾಷೆಯಲ್ಲಿ ಉತ್ತರಿಸಬಹುದು ?

ಉ: ಲಿಖಿತ ಪರೀಕ್ಷೆಯಲ್ಲಿನ ಪತ್ರಿಕೆ–1ನ್ನು ಕನ್ನಡ ಅಥವಾ ಆಂಗ್ಲ ಭಾಷೆಯಲ್ಲಿ ಉತ್ತರಿಸಬಹುದಾಗಿರುತ್ತದೆ ಮತ್ತು ಪತ್ರಿಕೆ–2 ವಸ್ತುನಿಷ್ಠ ಮಾದರಿಯದ್ದಾಗಿದ್ದು, ಓ.ಎಂ.ಆರ್. ಉತ್ತರ ಪತ್ರಿಕೆಯಲ್ಲಿ ಸರಿಯಾದ ಉತ್ತರಗಳನ್ನು ಗುರುತಿಸಬೇಕಾಗುತ್ತದೆ.

39). ಇಲಾಖೆಯು ನಡೆಸುವ ಪರೀಕ್ಷೆಗಳಿಗೆ ಹಾಜರಾದಲ್ಲಿ ಪರೀಕ್ಷಾ ಭತ್ಯೆ ನೀಡಲಾಗುತ್ತದೆಯೇ ? ಲಿಖಿತ ಪರೀಕ್ಷಾ ಕೇಂದ್ರದ ಕೊಠಡಿಯಲ್ಲಿ ಎಷ್ಟು ಸಮಯದೊಳಗೆ ಹಾಜರಿರಬೇಕು?

ಉ: ಇಲ್ಲ. ಇಲಾಖೆಯು ನಡೆಸುವ ಸಹಿಷ್ಣುತೆ & ದೇಹದಾರ್ಢ್ಯತೆ ಪರೀಕ್ಷೆ, ಲಿಖಿತ ಪರೀಕ್ಷೆ, ಮೌಖಿಕ ಪರೀಕ್ಷೆ ಮತ್ತು ವೈದ್ಯಕೀಯ ಪರೀಕ್ಷೆಗಳಿಗೆ ಯಾವುದೇ ತರಹದ ಪರೀಕ್ಷಾ ಭತ್ಯೆ ನೀಡಲಾಗುವುದಿಲ್ಲ. ಅಭ್ಯರ್ಥಿಗಳು ಲಿಖಿತ ಪರೀಕ್ಷೆಗೆ ನಿಗದಿಪಡಿಸಿರುವ ಸಮಯಕ್ಕಿಂತ ಅರ್ಧಗಂಟೆ ಮುಂಚಿತವಾಗಿ ಪರೀಕ್ಷಾ ಕೊಠಡಿಯಲ್ಲಿ ಹಾಜರಿರತಕ್ಕದ್ದು, ಆ ಸಮಯದಲ್ಲಿ ಪರೀಕ್ಷಾ ಮೇಲ್ವಿಚಾರಕರು ಉತ್ತರ ಪತ್ರಿಕೆಯಲ್ಲಿ ಅರ್ಜಿ ಸಂಖ್ಯೆ, ನೊಂದಣಿ ಸಂಖ್ಯೆ, ಪ್ರಶ್ನೆ ಪತ್ರಿಕೆ ಶ್ರೇಣಿ ಇತ್ಯಾದಿಗಳನ್ನು ಭರ್ತಿ ಮಾಡುವ ಬಗ್ಗೆ ಕೆಲವು ಮಾರ್ಗಸೂಚನೆಗಳನ್ನು ನೀಡುವರು.

40). ಲಿಖಿತ ಪರೀಕ್ಷೆ ಕೊಠಡಿಯಲ್ಲಿ ಮೊಬೈಲ್ ಫೋನನ್ನು ಬಳಸಬಹುದೇ ?

ಉ: ಇಲ್ಲ. ಲಿಖಿತ ಪರೀಕ್ಷೆ ಕೊಠಡಿಯಲ್ಲಿ ಮೊಬೈಲ್ ಫೋನ್, ಪೇಜರ್, ಕ್ಯಾಲ್ಕುಲೇಟರ್, ಲ್ಯಾಪ್‌ಟಾಪ್ ಇತ್ಯಾದಿಗಳ ಬಳಕೆಯನ್ನು ಕಟ್ಟುನಿಟ್ಟಾಗಿ ನಿಷೇಧಿಸಿದೆ. ಅಭ್ಯರ್ಥಿಯು ಪರೀಕ್ಷೆಗಳಲ್ಲಿ ಅನುಚಿತವಾಗಿ ವರ್ತಿಸಿದರೆ ಅಥವಾ ನಕಲು ಮಾಡಿರುವುದು ಕಂಡು ಬಂದರೆ ಅಥವಾ ನಕಲು ಮಾಡುವ

ಸಾಮಗ್ರಿಗಳನ್ನು ಹೊಂದಿದ್ದರೆ, ಅಂತಹ ಅಭ್ಯರ್ಥಿಗಳನ್ನು 3 ವರ್ಷಗಳ ಕಾಲ ಡಿಬಾರ್ ಮಾಡಲಾಗುವುದು.

41) ಆರ್‌ಎಸ್‌ಐ ಹುದ್ದೆಯ ಪ್ರಶ್ನೆ ಪತ್ರಿಕೆಯ ಅಂಕಗಳೆಷ್ಟು?

ಉ: ಆರ್‌ಎಸ್‌ಐ ಹುದ್ದೆಗೆ 200 ಅಂಕಗಳ ಎರಡು ಪ್ರಶ್ನೆ ಪತ್ರಿಕೆಗಳಿದ್ದು, ಮೊದಲನೆಯ ಪ್ರಶ್ನೆ ಪತ್ರಿಕೆಯಲ್ಲಿ 50 ಅಂಕಗಳ ಪ್ರಶ್ನೆಗಳಿಗೆ ಪ್ರಬಂದ ಬರೆಯುವುದು, ಭಾಷಾಂತರ ಮಾಡುವುದು ಮತ್ತು ಸಾರಾಂಶವನ್ನು 90 ನಿಮಿಷಗಳಲ್ಲಿ ಬರೆಯಬೇಕಾಗಿರುತ್ತದೆ. ಎರಡನೇ ಪ್ರಶ್ನೆಪತ್ರಿಕೆಯಲ್ಲಿ 150 ಅಂಕಗಳ ವಸ್ತುನಿಷ್ಠ ಮಾದರಿಯಾಗಿದ್ದು, ಬಹುವಿಧ ಆಯ್ಕೆಯ ಉತ್ತರಗಳ ಲಿಖಿತ ಪರೀಕ್ಷೆಯು 90 ನಿಮಿಷಗಳ ಅವಧಿಯನ್ನು ಹೊಂದಿದ್ದು, ತಪ್ಪು ಉತ್ತರಗಳಿಗೆ ಅಂಕಗಳನ್ನು ಕಳೆಯಲಾಗುವುದು.
**(ಹೆಚ್ಚಿನ ಮಾಹಿತಿಗಾಗಿ ನೇಮಕಾತಿ ಅಧಿಸೂಚನೆಯನ್ನು ನೋಡುವುದು).**

42) ಪ್ರಶ್ನೆ ಪತ್ರಿಕೆಯಲ್ಲಿ ಮುದ್ರಣ ದೋಷವಿದ್ದಲ್ಲಿ ಅಥವಾ ಪ್ರಶ್ನೆ ಪತ್ರಿಕೆಯ ಪ್ರಶ್ನೆಯ ಬಗ್ಗೆ ಆಕ್ಷೇಪಣೆ ಇದ್ದಲ್ಲಿ, ಅದನ್ನು ಪರೀಕ್ಷಾ ಕೊಠಡಿಯ ಮೇಲ್ವಿಚಾರಕರ ಗಮನಕ್ಕೆ ತರಬಹುದೇ?

ಉ: ಹೌದು. ಪರೀಕ್ಷಾ ಕೇಂದ್ರವನ್ನು ಬಿಡುವ ಮೊದಲು ಆಯಾ ಪರೀಕ್ಷಾ ದಿನವೇ ಸಂಬಂಧಿತ ಮೇಲ್ವಿಚಾರಕರ ಮುಖಾಂತರ ಅವರ ಹೆಸರು, ವಿಳಾಸ, ನೋಂದಣಿ ಸಂಖ್ಯೆ, ಇತ್ಯಾದಿಗಳನ್ನು ನಮೂದಿಸಿರುವ ಲಿಖಿತ ಮನವಿಯನ್ನು ಸಲ್ಲಿಸಿ ಸ್ವೀಕೃತಿ ಪಡೆಯಬೇಕು . ಪರೀಕ್ಷಾ ಕೇಂದ್ರ ಬಿಟ್ಟ ನಂತರ ಕಳುಹಿಸುವ / ಸಲ್ಲಿಸುವ ಯಾವುದೇ ಆಕ್ಷೇಪಣೆಗಳನ್ನು ಮಾನ್ಯ ಮಾಡಲಾಗುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ಅಧಿಸೂಚನೆಯ ಪುಟ ಸಂಖ್ಯೆ:13ರಲ್ಲಿನ (ಈ)ಯನ್ನು ನೋಡುವುದು/ ಓದುವುದು.

43). ಲಿಖಿತ ಪರೀಕ್ಷೆಗೆ ಕನಿಷ್ಠ ಅಂಕಗಳನ್ನು ನಿಗದಿಪಡಿಸಲಾಗಿದೆಯೇ?

ಉ: ಇಲ್ಲ. ಯಾವುದೇ ಕನಿಷ್ಠ ಅಂಕಗಳನ್ನು ನಿಗದಿಪಡಿಸಿರುವುದಿಲ್ಲ.

44) ಯಾವ ಬಣ್ಣದ ಪೆನ್ನಿನಿಂದ ಉತ್ತರ ಪತ್ರಿಕೆಯನ್ನು ಭರ್ತಿ ಮಾಡಬೇಕು ?

ಉ: ಉತ್ತರ ಪತ್ರಿಕೆಯನ್ನು ಭರ್ತಿ ಮಾಡಲು ಕಪ್ಪು ಅಥವಾ ನೀಲಿ ಬಾಲ್ ಪಾಯಿಂಟ್ ಪೆನ್ ಉಪಯೋಗಿಸುವುದು.

**<u>ಟಿಪ್ಪಣಿ</u> : 1) ಮಾಜಿ ಸೈನಿಕ ಅಭ್ಯರ್ಥಿಗಳಿಗೆ ಮೀಸಲಿರಿಸಿರುವ ಹುದ್ದೆಗಳಿಗೆ ನಿಯಮಾನುಸಾರ ಕನಿಷ್ಠ 168 ಸೆಂ.ಮೀ. ಎತ್ತರ ಹೊಂದಿರುವ ಮಾಜಿ ಸೈನಿಕ ಅಭ್ಯರ್ಥಿಗಳಿಗೆ ಮೊದಲ ಆದ್ಯತೆಯನ್ನು ನೀಡಿ ಆಯ್ಕೆಗೆ ಪರಿಗಣಿಸಲಾಗುವುದು. ನಂತರ ಮೀಸಲಿರಿಸಿದ ಹುದ್ದೆಗಳು ಖಾಲಿಯಿದ್ದಲ್ಲಿ ಕಡಿಮೆ ಎತ್ತರ ಹೊಂದಿರುವ ಮಾಜಿ ಸೈನಿಕ ಅಭ್ಯರ್ಥಿಗಳನ್ನು ಅರ್ಹತೆಯನುಸಾರ ಆಯ್ಕೆಗೆ ಪರಿಗಣಿಸಿ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ತಯಾರಿಸಲಾಗುವ್ವದು**

**2] ಸರ್ಕಾರದ ಪತ್ರ ಸಂಖ್ಯೆ: ಒಇ 207 ಪೊಸಿಅ 2018, ದಿನಾಂಕ: 05.02.2019 ರಲ್ಲಿ ಮಾಜಿ ಸೈನಿಕ ಅಭ್ಯರ್ಥಿಗಳನ್ನು ಆಯ್ಕೆಗೆ ಪರಿಗಣಿಸುವ ಸಂಬಂಧ ಸ್ಪಷ್ಟೀಕರಣ ನೀಡಿದ್ದು, ಅದರಂತೆ ಅರ್ಹ ಮೆರಿಟ್ ಅಭ್ಯರ್ಥಿಗಳನ್ನು ಆಯ್ಕೆ ಮಾಡುವ ಸಲುವಾಗಿ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ನಡೆಸಲಾಗುತ್ತದೆ. ಆದ್ದರಿಂದ ಅಭ್ಯರ್ಥಿಗಳು ಶೂನ್ಯ ಹಾಗೂ ಶೂನ್ಯಕ್ಕಿಂತ ಕಡಿಮೆ ಅಂಕವನ್ನು ಪಡೆದಲ್ಲಿ ಅಂತಹ ಅಭ್ಯರ್ಥಿಗಳನ್ನು ಆಯ್ಕೆಗೆ ಪರಿಗಣಿಸುವುದು ಸೂಕ್ತವಲ್ಲ ಮತ್ತು ಸಮಂಜಸವಾಗಿರುವುದಿಲ್ಲವೆಂದು ಸ್ಪಷ್ಟೀಕರಣ ನೀಡಲಾಗಿರುವುದರಿಂದ ಶೂನ್ಯ ಹಾಗೂ ಶೂನ್ಯಕ್ಕಿಂತ ಕಡಿಮೆ ಅಂಕವನ್ನು ಪಡೆದಂತಹ ಅಭ್ಯರ್ಥಿಗಳನ್ನು ಆಯ್ಕೆಗೆ ಪರಿಗಣಿಸದೆ ಆಯಾ ವರ್ಗಕ್ಕೆ ಸೇರಿದ ಇತರೆ ಅರ್ಹ ಅಭ್ಯರ್ಥಿಗಳನ್ನು ಆಯ್ಕೆಗೆ ಪರಿಗಣಿಸಲಾಗುವುದು.**

**(ಹೆಚ್ಚಿನ ಮಾಹಿತಿಗಾಗಿ ನೇಮಕಾತಿ ಅಧಿಸೂಚನೆಯನ್ನು ನೋಡುವುದು).**

45) ವೈದ್ಯಕೀಯ ಪರೀಕ್ಷೆ ಎಂದರೇನು? ಇದರಲ್ಲಿ ಯಾವ ರೀತಿಯ ವೈದ್ಯಕೀಯ ಪರೀಕ್ಷೆಯನ್ನು ನಡೆಸಲಾಗುತ್ತದೆ?

ಉ: ತಾತ್ಕಾಲಿಕವಾಗಿ ಆಯ್ಕೆಯಾದ ಅಭ್ಯರ್ಥಿಗಳನ್ನು ನೇಮಕಾತಿ ಸಮಿತಿಯು ರಚಿಸಿದ ಒಂದು ವೈದ್ಯಕೀಯ ಮಂಡಳಿಯ ಮುಂದೆ ಹಾಜರುಪಡಿಸಿ ವೈದ್ಯಕೀಯ ಪರೀಕ್ಷೆಯನ್ನು ನಡೆಸಲಾಗುತ್ತದೆ. ಇದರಲ್ಲಿ ಕಣ್ಣಿನ ಪರೀಕ್ಷೆ, ಶ್ರವಣ ಶಕ್ತಿ, ಅಪಧಮನಿ ಊತ, ಮಾತಿನಲ್ಲಿ ಅಡಚಣೆ ಮತ್ತು ಕ್ಷ-ಕಿರಣದ ಪರೀಕ್ಷೆಗಳನ್ನು ನಡೆಸಲಾಗುತ್ತದೆ.
(ಹೆಚ್ಚಿನ ಮಾಹಿತಿಗಾಗಿ ನೇಮಕಾತಿ ಅಧಿಸೂಚನೆಯನ್ನು ನೋಡುವುದು).

46) ಮೂಲ ದಾಖಲೆ ಎಂದರೇನು ?

ಉ: ಮೂಲ ದಾಖಲೆ ಎಂದರೆ ಯಾವ ಹುದ್ದೆಗೆ ಸೇರಲು ಬಯಸುತ್ತಾರೋ ಆ ಹುದ್ದೆಗೆ ನಿಗದಿ ಪಡಿಸಿದ ವಿದ್ಯಾರ್ಹತೆಯ ಅಂಕಪಟ್ಟಿ, ಹುಟ್ಟಿದ ದಿನಾಂಕದ ದಾಖಲೆ ಹಾಗೂ ಮೀಸಲಾತಿಗಳನ್ನು ಕೋರಿದ್ದಲ್ಲಿ ಅಂತಹ ಪ್ರಮಾಣ ಪತ್ರದ ಮೂಲ ಪ್ರತಿಗಳು.

47) ಮೂಲ ದಾಖಲೆಗಳನ್ನು ಯಾವಾಗ ಹಾಜರುಪಡಿಸಬೇಕು ?

ಉ: ನೇಮಕಾತಿ ಪ್ರಾಧಿಕಾರವು ಯಾವ ಹಂತದಲ್ಲಿಯಾದರೂ ಹಾಜರುಪಡಿಸಲು ಸೂಚಿಸಬಹುದು. ಅಭ್ಯರ್ಥಿಯು ಅರ್ಜಿಗಳನ್ನು ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಅಂದರೆ ದಿನಾಂಕ:**26.06.2020** ರೊಳಗೆ ಸಿಂಧುವಾಗಿರುವಂತೆ ಮೂಲ ದಾಖಲೆಗಳನ್ನು ಪಡೆದಿಟ್ಟುಕೊಂಡಿರತಕ್ಕದ್ದು ಹಾಗೂ ಹಾಜರುಪಡಿಸಲು ಸೂಚಿಸಿದಾಗ ಹಾಜರುಪಡಿಸತಕ್ಕದ್ದು.

48). ಮೂಲ ತರಬೇತಿ ಎಂದರೇನು ?

ಉ: ನೇಮಕಾತಿ ಹೊಂದಿದ ಅಭ್ಯರ್ಥಿಗಳು ಪೊಲೀಸ್ ಇಲಾಖೆಯು ತೀರ್ಮಾನಿಸಿದ ತರಬೇತಿ ಕೇಂದ್ರದಲ್ಲಿ ತರಬೇತಿಯನ್ನು ಪಡೆಯಬೇಕಾಗಿದ್ದು, ತರಬೇತಿಯ ಕೊನೆಯಲ್ಲಿ ನಿಗದಿಪಡಿಸಿದ ಪರೀಕ್ಷೆಗಳಲ್ಲಿ ಉತ್ತೀರ್ಣರಾಗಬೇಕು. (ಹೆಚ್ಚಿನ ಮಾಹಿತಿಗಾಗಿ ನೇಮಕಾತಿ ಅಧಿಸೂಚನೆಯನ್ನು ನೋಡುವುದು).

49) ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, 2ಎ, 2ಬಿ, 3ಎ ಮತ್ತು 3ಬಿ ಅಭ್ಯರ್ಥಿಗಳು ಯಾವ ಜಾತಿ ಪ್ರಮಾಣ ಪತ್ರದ ಫಾರಂನ್ನು ಹಾಜರುಪಡಿಸಬೇಕು ?

ಉ: ಜಾತಿ ಮೀಸಲಾತಿ ಕೋರ ಬಯಸುವ ಅಭ್ಯರ್ಥಿಗಳು ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರದಿಂದ ಸಹಿ ಮತ್ತು ಮೇಲು ರುಜು ಮಾಡಿಸಿ ಮತ್ತು ಮೊಹರಿನೊಂದಿಗೆ ಈ ಕೆಳಕಂಡ ನಮೂನೆಗಳಲ್ಲಿ ಪ್ರಮಾಣ ಪತ್ರಗಳನ್ನು ಮಾಡಿಸಿರಬೇಕು.

ಎ) ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ : ನಮೂನೆ-ಡಿ
ಬಿ) ಪ್ರವರ್ಗ - 1 : ನಮೂನೆ-ಇ
ಸಿ) ಪ್ರವರ್ಗ- 2ಎ, 2ಬಿ, 3ಎ, 3ಬಿ : ನಮೂನೆ - ಎಫ್
ಇವುಗಳ ನಮೂನೆಯನ್ನು ಅಧಿಸೂಚನೆಯಲ್ಲಿ ಮಾಹಿತಿಗಾಗಿ ನೀಡಲಾಗಿದೆ.

50). ನೇಮಕಾತಿಯಲ್ಲಿ ವಿವಿಧ ಜಾತಿ ಮತ್ತು ವರ್ಗಗಳಿಗೆ ಎಷ್ಟು ಮೀಸಲಾತಿಯನ್ನು ನೀಡಲಾಗುತ್ತದೆ ?

ಉ:

| | | |
|---|---|---|
| ಸಾಮಾನ್ಯ ವರ್ಗ | - | 50% |
| ಪರಿಶಿಷ್ಟ ಜಾತಿ | - | 15% |
| ಪರಿಶಿಷ್ಟ ಪಂಗಡ | - | 03% |
| ಪ್ರವರ್ಗ- 1 | - | 04% |
| ಪ್ರವರ್ಗ- 2ಎ | - | 15% |
| ಪ್ರವರ್ಗ- 2ಬಿ | - | 04% |
| ಪ್ರವರ್ಗ- 3ಎ | - | 04% |
| ಪ್ರವರ್ಗ- 3ಬಿ | - | 05% |

(ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ/08/ಸೆಹಿಮ/95, ದಿನಾಂಕ: 20.06.1995 ರಲ್ಲಿರುವಂತೆ)

51). ಗ್ರಾಮೀಣ ಅಭ್ಯರ್ಥಿ ಎಂದರೇನು ? ಪ್ರಮಾಣ ಪತ್ರವನ್ನು ಯಾರಿಂದ ಮತ್ತು ಯಾವಾಗ ಪಡೆದಿರಬೇಕು?

ಉ: 1ನೇ ತರಗತಿಯಿಂದ 10ನೇ ತರಗತಿಯವರೆಗೆ ನಿರಂತರವಾಗಿ ಗ್ರಾಮೀಣ ಪ್ರದೇಶದಲ್ಲಿ ವ್ಯಾಸಂಗ ಮಾಡಿರುವ ಅಭ್ಯರ್ಥಿಗಳಿಗೆ ಗ್ರಾಮೀಣ ಅಭ್ಯರ್ಥಿ ಎನ್ನುತ್ತಾರೆ. ಗ್ರಾಮೀಣ ಮೀಸಲಾತಿ ಪ್ರಮಾಣಪತ್ರವನ್ನು ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರಿಂದ ಪಡೆದು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ರುಜು ಮಾಡಿಸಿರಬೇಕು ಹಾಗು ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದ ಒಳಗೆ ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರವನ್ನು ಪಡೆದಿರತಕ್ಕದ್ದು.

52) ಕನ್ನಡ ಮಾಧ್ಯಮ ಅಭ್ಯರ್ಥಿ ಎಂದರೇನು ? ಪ್ರಮಾಣ ಪತ್ರವನ್ನು ಯಾರಿಂದ ಮತ್ತು ಯಾವಾಗ ಪಡೆದಿರಬೇಕು?

ಉ: 1ನೇ ತರಗತಿಯಿಂದ 10ನೇ ತರಗತಿಯವರೆಗೆ ನಿರಂತರವಾಗಿ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಅಭ್ಯರ್ಥಿಗಳಿಗೆ ಕನ್ನಡ ಮಾಧ್ಯಮ ಅಭ್ಯರ್ಥಿ ಎನ್ನುತ್ತಾರೆ. ಕನ್ನಡ ಮೀಸಲಾತಿ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರಿಂದ ಪಡೆದು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ರುಜು ಮಾಡಿಸಿರಬೇಕು ಹಾಗು ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದ ಒಳಗೆ ಕನ್ನಡ ಮಾಧ್ಯಮ ಮೀಸಲಾತಿ ಪ್ರಮಾಣ ಪತ್ರವನ್ನು ಪಡೆದಿರತಕ್ಕದ್ದು.

53). ಮಾಜಿ ಸೈನಿಕ ಅಭ್ಯರ್ಥಿ ಎಂದರೇನು ?

ಉ: ಭೂಸೇನೆ, ವಾಯು ಸೇನೆ, ನೌಕಾ ಸೇನೆಯಲ್ಲಿ ಸೇವೆ ಸಲ್ಲಿಸಿ ಸೈನ್ಯ ವಿಯೋಜನೆ, ಸೇವೆಯಿಂದ ತೆಗೆದು ಹಾಕಿದ ಹಾಗೂ ಸೇವಾ ನಿವೃತ್ತಿ ಹೊಂದಿರುವ ಯೋಧರನ್ನು ಮಾಜಿ ಸೈನಿಕ ಅಭ್ಯರ್ಥಿ ಎನ್ನುತ್ತಾರೆ.

54). ಯೋಜನಾ ನಿರಾಶ್ರಿತ ಅಭ್ಯರ್ಥಿ ಎಂದರೇನು? ಪ್ರಮಾಣ ಪತ್ರವನ್ನು ಯಾರಿಂದ ಮತ್ತು ಎಂದು ಪಡೆದಿರಬೇಕು?

ಉ: ಸರ್ಕಾರದ ಯೋಜನೆಗಳಿಂದ ತಾವು ಅವಲಂಬಿತರಾಗಿದ್ದ ಕೃಷಿ ಭೂಮಿ, ಮನೆಗಳನ್ನು ಕಳೆದುಕೊಂಡ ಅಭ್ಯರ್ಥಿಗಳನ್ನು ಯೋಜನಾ ನಿರಾಶ್ರಿತ ಅಭ್ಯರ್ಥಿ ಎನ್ನುತ್ತಾರೆ. ಪ್ರಮಾಣ ಪತ್ರವನ್ನು ನಿಗದಿ ಪಡಿಸಿರುವ ನಮೂನೆಯಲ್ಲಿ ಸಂಬಂಧಪಟ್ಟ ತಹಶೀಲ್ದಾರ್‌ರವರಿಂದ ಪಡೆದು ಅರ್ಜಿ ಸಲ್ಲಿಸಲು ನಿಗದಿ ಪಡಿಸಿರುವ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು.

55). ಗ್ರಾಮೀಣ ಅಭ್ಯರ್ಥಿಗಳಿಗೆ ಶೇಕಡ ಎಷ್ಟು ಮೀಸಲಾತಿ ನೀಡಲಾಗಿದೆ ?

ಉ: ಗ್ರಾಮೀಣ ಅಭ್ಯರ್ಥಿಗಳಿಗೆ 25% ಮೀಸಲಾತಿ ನೀಡಲಾಗಿದೆ. (ಸರ್ಕಾರದ ಆದೇಶ ಸಂಖ್ಯೆ. ಸಿಆಸುಇ/53/ಸೆನೆನಿ/2007, ದಿನಾಂಕ: 04.01.2008ರ ಪ್ರಕಾರ)

56). ಕನ್ನಡ ಮಾಧ್ಯಮ ಅಭ್ಯರ್ಥಿಗಳಿಗೆ ಶೇಕಡ ಎಷ್ಟು ಮೀಸಲಾತಿ ನೀಡಲಾಗಿದೆ ?

ಉ: ಕನ್ನಡ ಮಾಧ್ಯಮ ಅಭ್ಯರ್ಥಿಗಳಿಗೆ 5% ಮೀಸಲಾತಿ ನೀಡಲಾಗಿದೆ. (ಸರ್ಕಾರದ ಆದೇಶ ಸಂಖ್ಯೆ .ಸಿಆಸುಇ/53/ಸೆನೆನಿ/2007, ದಿನಾಂಕ: 04.01.2008ರ ಪ್ರಕಾರ)

57). ಯೋಜನೆಗಳಿಂದ ನಿರಾಶ್ರಿತಗೊಂಡ ಅಭ್ಯರ್ಥಿಗಳಿಗೆ ಶೇಕಡ ಎಷ್ಟು ಮೀಸಲಾತಿ ನೀಡಲಾಗಿದೆ ?

ಉ: ಯೋಜನೆಗಳಿಂದ ನಿರಾಶ್ರಿತಗೊಂಡ ಅಭ್ಯರ್ಥಿಗಳಿಗೆ 5% ಮೀಸಲಾತಿ ನೀಡಲಾಗಿದೆ. (ಸರ್ಕಾರದ ಆದೇಶ ಸಂಖ್ಯೆ. ಸಿಆಸುಇ/53/ಸೆನೆನಿ/2007, ದಿನಾಂಕ: 04.01.2008ರ ಪ್ರಕಾರ)

58). ಮಾಜಿ ಸೈನಿಕ ಅಭ್ಯರ್ಥಿಗಳಿಗೆ ಶೇಕಡ ಎಷ್ಟು ಮೀಸಲಾತಿ ನೀಡಲಾಗಿದೆ ?

ಉ: ಮಾಜಿ ಸೈನಿಕ ಅಭ್ಯರ್ಥಿಗಳಿಗೆ 10% ಮೀಸಲಾತಿ ನೀಡಲಾಗಿದೆ. (ಸರ್ಕಾರದ ಆದೇಶ ಸಂಖ್ಯೆ. ಸಿಆಸುಇ/53/ಸೆನೆನಿ/2007, ದಿನಾಂಕ: 04.01.2008ರ ಪ್ರಕಾರ)

59). ಮಾಜಿ ಸೈನಿಕ ಅಭ್ಯರ್ಥಿಗಳು ಯಾವ ಪ್ರಮಾಣ ಪತ್ರಗಳನ್ನು ಸಲ್ಲಿಸಬೇಕಾಗುತ್ತದೆ ?

ಉ: ಮಾಜಿ ಸೈನಿಕ ಅಭ್ಯರ್ಥಿಗಳು ವಿದ್ಯಾರ್ಹತೆಗೆ ಸಂಬಂಧಿಸಿದಂತೆ ಪ್ರಮಾಣ ಪತ್ರದ ಜೊತೆಗೆ ಸೈನಿಕ ಸೇವೆಯಿಂದ ಬಿಡುಗಡೆಯಾದ / ಮುಕ್ತಿ ಹೊಂದಿದ ಬಗೆಗಿನ ಪ್ರಮಾಣ ಪತ್ರ / ನಿರಾಕ್ಷೇಪಣಾ ಪ್ರಮಾಣ ಪತ್ರ ಮತ್ತು ಜಾತಿ ಮೀಸಲಾತಿ ಕೋರಿದ್ದಲ್ಲಿ ಜಾತಿ ಪ್ರಮಾಣ ಪತ್ರ ಸಲ್ಲಿಸಬೇಕಾಗುತ್ತದೆ.

60). ಮಾಜಿ ಸೈನಿಕ ಅಭ್ಯರ್ಥಿಗಳಿಗೆ ಅರ್ಜಿ ಸಲ್ಲಿಸಲು ಬೇಕಾಗಿರುವ ವಿದ್ಯಾರ್ಹತೆ ?

ಮಾಜಿ ಸೈನಿಕ ಅಭ್ಯರ್ಥಿಯು ಭೂಸೇನೆ, ನೌಕಾಸೇನೆ ಹಾಗೂ ವಾಯುಸೇನೆಯಲ್ಲಿ ಕರ್ತವ್ಯ ನಿರ್ವಹಿಸಿ ನಿವೃತ್ತಿ ಹೊಂದಿರಬೇಕು. ಸೇನೆಯಲ್ಲಿ ನೀಡುವ ಪದವಿ ಪ್ರಮಾಣಪತ್ರ ಪಡೆದುಕೊಂಡಿರಬೇಕು ಅಥವಾ ಯು.ಜಿ.ಸಿಯಿಂದ ಮಾನ್ಯತೆ ಪಡೆದಿರುವ ಅಂಗೀಕೃತ ವಿಶ್ವವಿದ್ಯಾಲಯದಲ್ಲಿ ಪದವಿ ಅಥವಾ ತತ್ಸಮಾನ ಪದವಿಯನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕ, ಅಂದರೆ **26.06.2020**ಕ್ಕೆ ಹೊಂದಿರಬೇಕು.

(ಮಾಜಿ ಸೈನಿಕ ಅಭ್ಯರ್ಥಿಗಳು ವಿದ್ಯಾರ್ಹತೆಯ ಪ್ರಮಾಣ ಪತ್ರವನ್ನು ದಿನಾಂಕ **26.06.2020** ರೊಳಗೆ ಹೊಂದಿರುವ ಅಭ್ಯರ್ಥಿಗಳ ಅಭ್ಯರ್ಥಿತನವನ್ನು ಮಾತ್ರ ಪರಿಗಣಿಸಲಾಗುವುದು).

61). ಮಾಜಿ ಸೈನಿಕ ಅಭ್ಯರ್ಥಿಗಳಿಗೆ ಸೈನ್ಯದಿಂದ ವಿಯೋಜನೆ ಹೊಂದುವಾಗ ನೀಡುವ ಗ್ರಾಜ್ಯುಯೇಟ್ ಪ್ರಮಾಣ ಪತ್ರ ಹೊಂದಿದ್ದರೆ ಅರ್ಜಿ ಸಲ್ಲಿಸಬಹುದೇ?

ಉ: ಮಾಜಿ ಸೈನಿಕನು ಸೈನಿಕನಾಗಿ ಭರ್ತಿ ಹೊಂದಿ, ತದ ನಂತರ ಸೈನ್ಯದಿಂದ ವಿಯೋಜನೆ ಹೊಂದುವಾಗ, ಸೈನ್ಯದಿಂದ ಮಾಜಿ ಸೈನಿಕನಿಗೆ ನೀಡುವ ಗ್ರಾಜ್ಯುಯೇಷನ್ ಸರ್ಟಿಫಿಕೇಟ್ ಹೊಂದಿರುವ ಮಾಜಿಸೈನಿಕ ಅಭ್ಯರ್ಥಿಗಳು ಸದರಿ ಹುದ್ದೆಗೆ ಅರ್ಜಿ ಸಲ್ಲಿಸಲು ಅರ್ಹರಾಗಿರುತ್ತಾರೆ.

62). ಮಾಜಿ ಸೈನಿಕ ಅಭ್ಯರ್ಥಿಗಳು ಒಮ್ಮೆ ಸರ್ಕಾರಿ ನೌಕರಿಗೆ ಮಾಜಿ ಸೈನಿಕ ಮೀಸಲಾತಿಯನ್ನು ಕೋರಿ ಆಯ್ಕೆಯಾದಲ್ಲಿ, ಮತ್ತೊಮ್ಮೆ ಮಾಜಿ ಸೈನಿಕ ಮೀಸಲಾತಿಯನ್ನು ಪಡೆಯಬಹುದೇ ?

ಉ: ಇಲ್ಲ. ಮಾಜಿ ಸೈನಿಕ ಅಭ್ಯರ್ಥಿಗಳು ಒಂದು ಬಾರಿ ಮಾಜಿ ಸೈನಿಕ ಮೀಸಲಾತಿಯನ್ನು ಉಪಯೋಗಿಸಿಕೊಂಡು ಸರ್ಕಾರಿ ಹುದ್ದೆಗೆ ಆಯ್ಕೆಯಾದಲ್ಲಿ ಅಂತಹ ಮಾಜಿಸೈನಿಕ ಅಭ್ಯರ್ಥಿಯು ಸದರಿ ಮೀಸಲಾತಿ ಅಡಿ ಪುನರ್ ನೇಮಕಕ್ಕೆ ಅರ್ಹರಿರುವುದಿಲ್ಲ.

63) ಮಾಜಿ ಸೈನಿಕ ಅಭ್ಯರ್ಥಿಗಳು ಯಾವಾಗ ಅರ್ಜಿಯನ್ನು ಸಲ್ಲಿಸಬಹುದಾಗಿದೆ?

ಉ: ಕೇಂದ್ರ ಸಶಸ್ತ್ರದಳದ ಸೇವೆಯಲ್ಲಿ ಸೇವೆಯಿಂದ ನಿವೃತ್ತಿ ಹೊಂದಿದ ನಂತರ ಮಾಜಿ ಸೈನಿಕರ ವರ್ಗದಡಿ ಬರುವ ವ್ಯಕ್ತಿಗೆ ಒಪ್ಪಂದವು ಪೂರ್ಣವಾಗಲು ಒಂದು ವರ್ಷಕ್ಕೆ ಮುನ್ನ ಉದ್ಯೋಗಕ್ಕೆ ಅರ್ಜಿ ಹಾಕಿಕೊಳ್ಳಲು ಹಾಗೂ ಅವರಿಗೆ ಮಾಜಿ ಸೈನಿಕರಿಗೆ ದೊರೆಯುವ ಎಲ್ಲಾ ಸೌಲಭ್ಯಗಳನ್ನು ಹೊಂದಲು ಅನುಮತಿ ನೀಡಲಾಗಿದ್ದು, ಅಂತಹ ಮಾಜಿ ಸೈನಿಕ ಅಭ್ಯರ್ಥಿಗಳು ಅರ್ಜಿಯನ್ನು ಸಲ್ಲಿಸಬಹುದಾಗಿದೆ.

64) ಮಾಜಿ ಸೈನಿಕ ಮಕ್ಕಳು ಸಹ ಮಾಜಿ ಸೈನಿಕ ಮೀಸಲಾತಿ ಕೋರಿ ಅರ್ಜಿಯನ್ನು ಸಲ್ಲಿಸಬಹುದೇ?

ಉ: ಸೇನೆಯಲ್ಲಿ ಸೇವೆ ನಿರ್ವಹಿಸಿ ಮರಣ ಅಥವಾ ಶಾಶ್ವತ ವಿಕಲತೆ ಹೊಂದಿದ ಮಾಜಿ ಸೈನಿಕರ ಮಕ್ಕಳು ಅರ್ಜಿಯನ್ನು ಸಲ್ಲಿಸಬಹುದಾಗಿದೆ.

65). ಮಾಜಿ ಸೈನಿಕ ಮಕ್ಕಳಿಗೆ ಶೇಕಡ ಮೀಸಲಾತಿ ಎಷ್ಟು ಪರಿಗಣಿಸಲಾಗುವುದು ?

ಉ: ಮಾಜಿ ಸೈನಿಕ ಅಭ್ಯರ್ಥಿಗಳಿಗೆ ಮೀಸಲಿರುವ ಶೇಕಡ 10 ರೊಳಗೆ ಮಾಜಿ ಸೈನಿಕ ಮಕ್ಕಳನ್ನು ಸಹ ಪರಿಗಣಿಸಲಾಗುವುದು.

66) ಮಾಜಿ ಸೈನಿಕರ ಮಕ್ಕಳಿಗೆ ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಯಲ್ಲಿ ವಿನಾಯಿತಿ ನೀಡಲಾಗಿದೆಯೇ?

ಉ: ಮಾಜಿ ಸೈನಿಕರ ಮಕ್ಕಳಿಗೆ ಸಹಿಷ್ಣುತೆ ಮತ್ತು ದೇಹದಾಢ್ಯತೆ ಪರೀಕ್ಷೆಯಲ್ಲಿ ವಿನಾಯಿತಿ ಇರುವುದಿಲ್ಲ ಮತ್ತು ಸಾಮಾನ್ಯ ಅಭ್ಯರ್ಥಿಗಳಿಗೆ ಇರುವ ಅರ್ಹತೆಯ ಮಟ್ಟವನ್ನು ಪೂರ್ಣಗೊಳಿಸಬೇಕಾಗುತ್ತದೆ.

**ಕೆ.ಸಿ.ಎಸ್. (ಸಾಮಾನ್ಯ ನೇಮಕಾತಿ) ನಿಯಮ 9(1) ರನ್ವಯ ಕೇಂದ್ರ ಸಶಸ್ತ್ರದಳದಲ್ಲಿ ಸೇವೆ ಸಲ್ಲಿಸುವಾಗ ಹತರಾದ ಅಥವಾ ಶಾಶ್ವತವಾಗಿ ದೈಹಿಕ ವಿಕಲತೆ ಹೊಂದಿದ ವ್ಯಕ್ತಿಗಳ ಕುಟುಂಬದವರು (ಸಂದರ್ಭಾನುಸಾರ ಹೆಂಡತಿ ಅಥವಾ ಗಂಡ ಮತ್ತು ಮಕ್ಕಳು ಮತ್ತು ಮಲ ಮಕ್ಕಳು) ಮಾಜಿ ಸೈನಿಕ ಮೀಸಲಾತಿಗೆ ಅರ್ಹರಾಗಿರುತ್ತಾರೆ. ಮಾಜಿ ಸೈನಿಕ ಮಕ್ಕಳಿಗೆ ವಯೋಮಿತಿ ಸಡಿಲಿಕೆ, ಸಹಿಷ್ಣುತೆ ಪರೀಕ್ಷೆ ಹಾಗೂ ದೇಹದಾರ್ಢ್ಯತೆ ಪರೀಕ್ಷೆಯಲ್ಲಿ ಯಾವುದೇ ತರಹದ ವಿನಾಯಿತಿಯನ್ನು ನೀಡಲಾಗುವುದಿಲ್ಲ. ಕರ್ತವ್ಯ ನಿರ್ವಹಿಸುತ್ತಿದ್ದ ಕೇಂದ್ರ ಸಶಸ್ತ್ರದಳದ ಅಧಿಕಾರಿಗಳಿಂದ ಅವಲಂಬಿತ ಪ್ರಮಾಣ ಪತ್ರ ಮತ್ತು ಸೈನಿಕ ಬೋರ್ಡ್‌ನಿಂದ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡಿರತಕ್ಕದ್ದು.**

**ಅಭ್ಯರ್ಥಿಯು ಸೈನಿಕ್ ಬೋರ್ಡ್‌ನಿಂದ ಪಡೆದ ಪ್ರಮಾಣಪತ್ರವನ್ನು ಅರ್ಜಿಸಲ್ಲಿಸುವಾಗ ಅಪ್‌ಲೋಡ್ ಮಾಡತಕ್ಕದ್ದು. ಇಲ್ಲವಾದಲ್ಲಿ ಅರ್ಜಿಯನ್ನು ಪೂರ್ಣಗೊಳಿಸಲು ಸಾಧ್ಯವಾಗುವುದಿಲ್ಲ.**

67). ಎಂತಹ ಅಭ್ಯರ್ಥಿಗಳ ವಿರುದ್ಧ ಶಿಸ್ತಿನ ಕ್ರಮ ಕೈಗೊಳ್ಳಬಹುದಾಗಿದೆ?

ಉ: ಆನ್-ಲೈನ್ ಮೂಲಕ ಸಲ್ಲಿಸಲಾಗುವ ಅರ್ಜಿಯಲ್ಲಿ ನೀಡಲಾಗುವ ಮಾಹಿತಿಯು ತಪ್ಪೆಂದು ಪರೀಕ್ಷೆಯಲ್ಲಿ ಭಾಗವಹಿಸುವ ಅಭ್ಯರ್ಥಿಗಳು ಪರೀಕ್ಷೆಯ ಮುಂಚಿತವಾಗಿ ಮತ್ತು ಪರೀಕ್ಷೆಯ ನಂತರ ಕಂಡು ಬಂದಲ್ಲಿ ಕಾನೂನು ರೀತ್ಯಾ ಸೂಕ್ತ ಕ್ರಮವನ್ನು ಕೈಗೊಳ್ಳಲಾಗುವುದು.

68). ಆನ್-ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ವೆಬ್-ಸೈಟ್ ಯಾವುದು ?

ಉ: ಆನ್-ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಹಾಗೂ ಮಾಹಿತಿಯನ್ನು ತಿಳಿದುಕೊಳ್ಳಲು www.ksp.gov.in ನ್ನು ನೋಡುವುದು.

69). ವಸ್ತುನಿಷ್ಠ ಪ್ರಶ್ನೆಗಳ ತಪ್ಪು ಉತ್ತರಗಳಿಗೆ ಎಷ್ಟು ಅಂಕಗಳನ್ನು ಕಳೆಯಲಾಗುತ್ತದೆ ?

ಉ: ವಸ್ತುನಿಷ್ಠ ಪ್ರಶ್ನೆಗಳ ತಪ್ಪು ಉತ್ತರಗಳಿಗೆ 0.25 (0.375) ಅಂಕಗಳನ್ನು ಕಳೆಯಲಾಗುತ್ತದೆ.

70). ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ ಹುದ್ದೆಗೆ ವೇತನ ಶ್ರೇಣಿ ಎಷ್ಟು ?

ಉ: ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ ಹುದ್ದೆಗೆ ವೇತನ ಶ್ರೇಣಿ ರೂ. 20000-500-21000-600-24600-700-28800-800-33600-900-36300 ಇರುತ್ತದೆ.

71). ಸಹಿಷ್ಣುತೆ & ದೇಹದಾರ್ಢ್ಯತೆ ಪರೀಕ್ಷೆ ಮತ್ತು ಲಿಖಿತ ಪರೀಕ್ಷೆಗೆ ಹಾಜರಾದಾಗ ಯಾವ ಗುರುತಿನ ಚೀಟಿಯನ್ನು ಹಾಜರು ಪಡಿಸಬೇಕಾಗುತ್ತದೆ ?

ಉ: ಈ ಕೆಳಗಿನ ಯಾವುದಾದರೊಂದು ಭಾವಚಿತ್ರವುಳ್ಳ ಗುರುತಿನ ಚೀಟಿಯನ್ನು ತೋರಿಸಬೇಕು.

i) ಪಾಸ್‌ಪೋರ್ಟ್ (Passport)

ii) ಚಾಲನಾ ಪರವಾನಗಿ ಪತ್ರ (Driving License)

iii) ಪಾನ್ ಕಾರ್ಡ್ (PAN Card)

iv) ರಾಜ್ಯ ಸರ್ಕಾರ/ ಕೇಂದ್ರ ಸರ್ಕಾರ / ಸಾರ್ವಜನಿಕ ಸ್ವಾಮ್ಯದ ಅಥವಾ ಸರ್ಕಾರದ ಅಧೀನಕ್ಕೊಳಪಟ್ಟ ಖಾಸಗಿ ಕಂಪನಿಗಳು ವಿತರಿಸಿರುವ ಭಾವಚಿತ್ರವಿರುವ ಸೇವಾ ಗುರುತಿನ ಚೀಟಿ (Service ID Card)

v) ಸಾರ್ವಜನಿಕ ಬ್ಯಾಂಕುಗಳು / ಅಂಚೆ ಕಛೇರಿಗಳು ವಿತರಿಸಿರುವ ಭಾವಚಿತ್ರವಿರುವ ಪಾಸ್ ಪುಸ್ತಕ (Pass Book with Photograph)

vi) ಭಾವಚಿತ್ರ ಸಮೇತ ನೋಂದಣಿಯಾಗಿರುವ ಸ್ವತ್ತಿನ ದಾಖಲೆ ಪತ್ರ ಅಥವಾ ಪಟ್ಟಾ ಪುಸ್ತಕ (Pattas and registered deeds with Photograph)

vii) ಭಾವಚಿತ್ರ ಸಮೇತ ಸಂಬಂಧಪಟ್ಟ ಪ್ರಾಧಿಕಾರಿಯವರು ವಿತರಿಸಿರುವ ಜಾತಿ ಪ್ರಮಾಣ ಪತ್ರ (Caste Certificate with Photo)

viii) ಮಾಜಿ ಸೈನಿಕ ಅಭ್ಯರ್ಥಿಗಳಿಗೆ ವಿತರಿಸಿರುವ ಪಿಂಚಣಿ ಪುಸ್ತಕ / ಪಿಂಚಣಿ ಮಂಜೂರಾತಿ ಆಗಿರುವ ಆದೇಶ (Ex-servicemen's pension book/pension payment order)

ix) ಎನ್.ಆರ್.ಇ.ಜಿ.ಎಸ್.ಯಿಂದ ನೀಡಿದ ಭಾವಚಿತ್ರವಿರುವ ಉದ್ಯೋಗ ಚೀಟಿ. (Job cards with Photograph)

x) ಎಲೆಕ್ಟೋರಲ್ ಫೋಟೋ ಗುರುತಿನ ಚೀಟಿ (EPIC).

72). ಶುಲ್ಕವನ್ನು ಯಾವ ವಿಧಾನದಲ್ಲಿ ಪಾವತಿಸಬೇಕು ?

ಉ: ಶುಲ್ಕವನ್ನು ನಗದು ರೂಪದಲ್ಲಿ ಎಸ್.ಬಿ.ಎಮ್ / ಎಸ್.ಬಿ.ಹೆಚ್ ಬ್ಯಾಂಕ್‌ನಲ್ಲಿ ಮಾತ್ರ ಪಾವತಿಸತಕ್ಕದ್ದು. ಡಿಡಿ, ಪೋಸ್ಟಲ್ ಆರ್ಡರ್, ಮನಿ ಆರ್ಡರ್ ಇವುಗಳನ್ನು ಸ್ವೀಕರಿಸಲಾಗುವುದಿಲ್ಲ.

73). ವಿಳಾಸದಲ್ಲಿ ಬದಲಾವಣೆ ಇದ್ದಲ್ಲಿ ಅದನ್ನು ಬದಲಾಯಿಸಬಹುದೇ ?

ಉ: ನೇಮಕಾತಿ ಪ್ರಕ್ರಿಯೆಯ ಯಾವುದೇ ಹಂತದಲ್ಲಿ ವಿಳಾಸ ಬದಲಾವಣೆಯಾಗಿದ್ದಲ್ಲಿ ತಕ್ಷಣದಲ್ಲಿ ಅಭ್ಯರ್ಥಿಗಳು ಲಿಖಿತ ಮೂಲಕ ನೇಮಕಾತಿ ಸಮಿತಿಯ ಗಮನಕ್ಕೆ ತರತಕ್ಕದ್ದು. ಈ ವಿಳಾಸ ಬದಲಾವಣೆಯನ್ನು ಪರಿಗಣಿಸಲು ನೇಮಕಾತಿ ಸಮಿತಿಯು ಪ್ರಯತ್ನಿಸುವುದು. ಆದಾಗ್ಯೂ ಈ ವಿಚಾರದಲ್ಲಿ ನೇಮಕಾತಿ ಸಮಿತಿಯು ಯಾವುದೇ ಜವಾಬ್ದಾರಿಯನ್ನು ವಹಿಸಿಕೊಳ್ಳುವುದಿಲ್ಲ. ಈ ಬಗ್ಗೆ ಅಭ್ಯರ್ಥಿಗಳು ಎಚ್ಚರ ವಹಿಸತಕ್ಕದ್ದು.

74). ಸೇವೆಯಲ್ಲಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಯಾವ ಪ್ರಮಾಣ ಪತ್ರವನ್ನು ಸಲ್ಲಿಸಬೇಕು?

ಉ: ಅಭ್ಯರ್ಥಿಯು ಅರ್ಜಿ ಹಾಕುವ ಸಮಯದಲ್ಲಿ ಯಾವುದೇ ಕೇಂದ್ರ / ರಾಜ್ಯ ಸರ್ಕಾರದ ಅಥವಾ ಸರ್ಕಾರದ ಯಾವುದೇ ಪ್ರಾಧಿಕಾರ ಅಥವಾ ಕೇಂದ್ರ ಅಥವಾ ರಾಜ್ಯ ಸಾರ್ವಜನಿಕ ಸ್ವಾಮ್ಯಗಳಲ್ಲಿ ನೌಕರಿಯಲ್ಲಿದ್ದಲ್ಲಿ ಅಂತಹವರು ಇಲಾಖಾ ಮುಖ್ಯಸ್ಥರ ಅಥವಾ ನೇಮಕಾತಿ ಪ್ರಾಧಿಕಾರದಿಂದ ಸೂಕ್ತ ದೃಢೀಕರಣದ ಸಹಿಯೊಂದಿಗೆ ಸಮುಚಿತ ಮಾರ್ಗದಲ್ಲಿ ಅರ್ಜಿಯನ್ನು ಸಲ್ಲಿಸಬೇಕು ಹಾಗೂ ಪೊಲೀಸ್ ಇಲಾಖೆಯಲ್ಲಿ ನೇಮಕಗೊಂಡಲ್ಲಿ ಪೊಲೀಸ್ ಸೇವೆಗೆ ಕರ್ತವ್ಯದಿಂದ ಬಿಡುಗಡೆ ಮಾಡಲು ಅನುಮತಿ ಪತ್ರ /ನಿರಾಕ್ಷೇಪಣ ಪ್ರಮಾಣ ಪತ್ರವನ್ನು (No Objection Certificate) ಪಡೆದಿಟ್ಟುಕೊಂಡಿದ್ದು, ನೇಮಕಾತಿ ಸಮಿತಿಯು ಸೂಚಿಸಿದಾಗ ಹಾಜರುಪಡಿಸತಕ್ಕದ್ದು.

75). ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ ಹುದ್ದೆಗೆ ಯಾರನ್ನು ಅನರ್ಹರೆಂದು ಪರಿಗಣಿಸುತ್ತೀರಿ?

ಉ: 1. ಡಿಪ್ಲೊಮಾ ಮತ್ತು ಐ.ಟಿ.ಐ ನಲ್ಲಿ ಅಭ್ಯಾಸ ಮಾಡಿದ ಫಿಟ್ಟರ್, ಟರ್ನರ್ ಮತ್ತು ಎಲೆಕ್ಟ್ರಿಷಿಯನ್ ಇತ್ಯಾದಿ ವಿದ್ಯಾರ್ಹತೆಗಳು ಪದವಿಗೆ ಸಮಾನವಾಗುವುದಿಲ್ಲ.

2. ಅರ್ಜಿ ಸಲ್ಲಿಸಲು ನಿಗದಿ ಪಡಿಸಿದ ಕೊನೆಯ ದಿನಾಂಕದಂದು ನಿಗದಿತ ವಿದ್ಯಾರ್ಹತೆ ಪಡೆಯಲು ಪರೀಕ್ಷೆ ಬರೆದು ಫಲಿತಾಂಶಕ್ಕಾಗಿ ಕಾಯುತ್ತಿರುವ ಅಭ್ಯರ್ಥಿಗಳು ಅರ್ಹರಾಗಿರುವುದಿಲ್ಲ.

3. ಭೂಸೇನೆ, ನೌಕಾಸೇನೆ ಮತ್ತು ವಾಯುಸೇನೆಯಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿಯನ್ನು ಹೊರತು ಪಡಿಸಿ, ಡಿಫೆನ್ಸ್ ಸೆಕ್ಯುರಿಟಿ ಕೋರ್, ಜನರಲ್ ರಿಸರ್ವ್ ಇಂಜಿನಿಯರಿಂಗ್ ಫೋರ್ಸ್, ಲೋಕ್ ಸಹಾಯಕ್ ಸೇನಾ ಮತ್ತು ಪ್ಯಾರಾ ಮಿಲಿಟರಿ ದಳದಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿ ಸೇರ್ಪಡೆಯಾಗುವುದಿಲ್ಲ ಮತ್ತು ಅಂತಹ ಸೇನೆಯಿಂದ ನಿವೃತ್ತಿ ವೇತನ ಪಡೆಯುತ್ತಿರುವ ಅಥವಾ ವೈದ್ಯಕೀಯ ಕಾರಣಗಳಿಂದ ಮಿಲಿಟರಿ ಸೇವೆಯಿಂದ ಬಿಡುಗಡೆಯಾದ ಅಥವಾ ವ್ಯಕ್ತಿಯ ಹಿಡಿತಕ್ಕೂ ಮೀರಿದ ಪರಿಸ್ಥಿತಿಗಳಿಂದ ಮತ್ತು ವೈದ್ಯಕೀಯ ಅಥವಾ ಅಸಾಮರ್ಥ್ಯದ ಪಿಂಚಣಿ ಪಡೆದು ಅಂತಹ ಸೇವೆಯಲ್ಲಿ ಬಿಡುಗಡೆಯಾದವನು. ಅಥವಾ ಸ್ವಂತ ಕೋರಿಕೆ ಹೊರತುಪಡಿಸಿ ಸಿಬ್ಬಂದಿ ಕಡಿತದ ಪರಿಣಾಮದಿಂದ ಅಂತಹ ಸೇವೆಯಿಂದ ಬಿಡುಗಡೆ ಹೊಂದಿದ ವ್ಯಕ್ತಿ ಅಥವಾ ತನ್ನ ಸ್ವಂತ ಕೋರಿಕೆ ಮೇರೆಗೆ ಅಥವಾ ದುರ್ನಡತೆ ಅಥವಾ ಅಸಾಮರ್ಥ್ಯದ ಕಾರಣದಿಂದಾಗಿ ತೆಗೆದುಹಾಕಿರುವ ಅಥವಾ ಕರ್ತವ್ಯದಿಂದ ವಜಾ ಮಾಡಿದ ವ್ಯಕ್ತಿಗಳನ್ನು ಹೊರತುಪಡಿಸಿ, ನಿರ್ದಿಷ್ಟ ಅವಧಿಯನ್ನು ಪೂರೈಸಿದ ತರುವಾಯ ಬಿಡುಗಡೆ ಹೊಂದಿದ ವ್ಯಕ್ತಿ ಮತ್ತು ಗ್ರಾಚ್ಯುಟಿ ಪಡೆಯುತ್ತಿರುವ ವ್ಯಕ್ತಿ ಮತ್ತು ಪ್ರಾಂತೀಯ ಸೇವೆಯ ಈ ಕೆಳಗೆ ಹೆಸರಿಸಿದ ವರ್ಗದ ಸಿಬ್ಬಂದಿಯವರು.

ಎ. ನಿರಂತರ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿದ ಪಿಂಚಣಿದಾರರು.
ಬಿ. ಮಿಲಿಟರಿ ಸೇವೆಯಿಂದಾಗಿ ಉಂಟಾದ ದೈಹಿಕ ಅಸಾಮರ್ಥ್ಯ ಹೊಂದಿ ಬಿಡುಗಡೆಯಾದ ವ್ಯಕ್ತಿ.
ಸಿ. ಗ್ಯಾಲಂಟ್ರಿ ಪ್ರಶಸ್ತಿ ವಿಜೇತರು ಹಾಗೂ ಸಮವಸ್ತ್ರವನ್ನು ತ್ಯಜಿಸಲು ಅನುಮತಿ ನೀಡುವವರೆಗೆ ರಾಜ್ಯ ನಾಗರೀಕ
ಸೇವೆ ಅಥವಾ ಹುದ್ದೆಗಳಿಗೆ ನೇಮಕ ಹೊಂದುವಂತಿಲ್ಲ.

4. ಕರ್ನಾಟಕ ರಾಜ್ಯದ, ಕೇಂದ್ರ ಸರ್ಕಾರದ ಯಾವುದೇ ಸರ್ಕಾರಿ ಹಾಗೂ ಅರೆ ಸರ್ಕಾರಿ ಸಂಸ್ಥೆಯ ಸೇವೆಯಿಂದ ವಜಾಗೊಂಡಿರುವ ನೌಕರರು ನೇಮಕಾತಿಗೆ ಅರ್ಹರಲ್ಲ.

76). ಅರ್ಹ ಅಭ್ಯರ್ಥಿಗಳು ಅರ್ಜಿ ಸಲ್ಲಿಸುವಾಗ ಯಾವ ಪ್ರಮಾಣ ಪತ್ರಗಳನ್ನು ಸಲ್ಲಿಸಬೇಕಾಗಿರುತ್ತದೆ.?

ಉ: ಅರ್ಹ ಅಭ್ಯರ್ಥಿಗಳು ಅರ್ಜಿ ಸಲ್ಲಿಸುವಾಗ ಯಾವುದೇ ಪ್ರಮಾಣ ಪತ್ರಗಳನ್ನು ಸಲ್ಲಿಸಬೇಕಾಗಿರುವುದಿಲ್ಲ, ಆದರೆ ಪ್ರಮಾಣ ಪತ್ರದ ಮಾಹಿತಿ ಮತ್ತು ಪ್ರಮಾಣ ಪತ್ರ ಪಡೆದ ದಿನಾಂಕ ನಮೂದಿಸಬೇಕಾಗಿರುತ್ತದೆ. ತದನಂತರ, ಅರ್ಹ ಅಭ್ಯರ್ಥಿಗಳು ಮೂಲ ದಾಖಲೆಗಳ ಪರಿಶೀಲನಾ ಸಂದರ್ಭದಲ್ಲಿ ಅರ್ಜಿಯಲ್ಲಿ ನಮೂದಿಸಿರುವ ಎಲ್ಲಾ ಮಾಹಿತಿಗಳಿಗೆ ಪೂರಕವಾಗಿ ಸದರಿ ದಾಖಲೆ / ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ತಪ್ಪದೇ ಹಾಜರುಪಡಿಸಬೇಕು ಹಾಗೂ ಅರ್ಜಿಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಪಡೆದಿರಬೇಕು. ತಪ್ಪಿದಲ್ಲಿ ಅಂತಹ ಮೀಸಲಾತಿಯನ್ನು ರದ್ದುಪಡಿಸಲಾಗುವುದು. ಒಂದು ವೇಳೆ, ಸಲ್ಲಿಸಿದ ಪ್ರಮಾಣ ಪತ್ರಗಳು ಕಳೆದು ಹೋದರೆ ನೇಮಕಾತಿ ಸಮಿತಿಯು ಜವಾಬ್ದಾರಿಯಾಗುವುದಿಲ್ಲ.

77). ಅಭ್ಯರ್ಥಿಗಳು ನೇಮಕಾತಿಯ ಯಾವುದೇ ನಿಯಮಗಳನ್ನು ಪ್ರಶ್ನಿಸಬಹುದೇ?

ಉ: ಅಭ್ಯರ್ಥಿಯು ಹುದ್ದೆಗೆ ಅರ್ಜಿ ಸಲ್ಲಿಸಿದ ತಕ್ಷಣ ತಾನು ನಿಯಮ ಮತ್ತು ವಿನಿಯಮಗಳಿಗೆ ಬದ್ಧನಾಗಿರುತ್ತಾನೆ ಎಂದು ಭಾವಿಸಲಾಗಿರುತ್ತದೆ. ಒಂದು ವೇಳೆ, ತಾನು ಸದರಿ ಹುದ್ದೆಗೆ ಆಯ್ಕೆಯಾಗದಿದ್ದ ಪಕ್ಷದಲ್ಲಿ ನಿಯಮಗಳನ್ನು ಪ್ರಶ್ನಿಸಲು ಬರುವುದಿಲ್ಲ.

78). ಪರೀಕ್ಷೆ ಮುಗಿದ ನಂತರ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವ ತಾತ್ಕಾಲಿಕ ಕೀ ಉತ್ತರವನ್ನು ಪ್ರಶ್ನಿಸಬಹುದೇ?

ಉ: ಪರೀಕ್ಷೆ ಮುಗಿದ ಒಂದು ಅಥವಾ ಎರಡು ದಿನಗಳ ನಂತರ Provisional Answer Key ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವುದು. ನಂತರ ಅಭ್ಯರ್ಥಿಗಳಿಗೆ ಒಂದು ವಾರದ ಕಾಲಾವಕಾಶವನ್ನು ನೀಡಲಾಗುವುದು. ಅಭ್ಯರ್ಥಿಗಳು Provisional Answer Key ಬಗ್ಗೆ ಏನಾದರೂ ಆಕ್ಷೇಪಣೆಗಳು ಇದ್ದಲ್ಲಿ ಆಕ್ಷೇಪಣೆಗಳ ಜೊತೆಗೆ ಸಂಬಂದಿಸಿದ ಸರಿಯಾದ ದಾಖಲೆಯನ್ನು ಸಹ ಲಗತ್ತಿಸಿ ಕಳುಹಿಸಬೇಕು. ಸದರಿ ಆಕ್ಷೇಪಣೆಗಳನ್ನು ಒಂದು ನುರಿತ ತಜ್ಞರ ಸಮಿತಿಗೆ ನೀಡಿ ಅವರಿಂದ ಸರಿಯಾದ ಉತ್ತರಗಳನ್ನು ಪಡೆದು Final Answer Key ಯನ್ನು ಪ್ರಕಟಿಸಲಾಗುವುದು ಮತ್ತು ಈ ಅಂತಿಮ ಉತ್ತರ ಕೀಗಳ ಪ್ರಕಾರ ಒ.ಎಂ.ಆರ್. ಉತ್ತರ ಪತ್ರಿಕೆಯನ್ನು ಮೌಲ್ಯಮಾಪನ ಮಾಡಲಾಗುವುದು.

79). ಅಭ್ಯರ್ಥಿಗಳಿಗೆ ಪತ್ರ ವ್ಯವಹಾರಕ್ಕೆ ಅವಕಾಶವಿರುವುದೇ?

ಉ: ಅಭ್ಯರ್ಥಿಯು ಅಂತರ್‌ಜಾಲದಲ್ಲಿ ಅರ್ಜಿಯನ್ನು ತುಂಬುವಾಗ ನೀಡಿರುವ ಮಾಹಿತಿಗಳ ಅನ್ವಯ ಸಮರ್ಪಕವಾಗಿ ಭರ್ತಿ ಮಾಡದೆ Junk Character /Unknown language ತುಂಬಿದ ಅರ್ಜಿಗಳು ತಿರಸ್ಕೃತವಾದಲ್ಲಿ ತತ್ಸಂಬಂಧ ಯಾವುದೇ ರೀತಿಯ ಪತ್ರ ವ್ಯವಹಾರಕ್ಕೆ ಅವಕಾಶವಿರುವುದಿಲ್ಲ.

80). ಹೈದರಾಬಾದ್-ಕರ್ನಾಟಕ ಪ್ರದೇಶದ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದೇ?

ಉ: ಹೈದರಾಬಾದ್-ಕರ್ನಾಟಕ ಪ್ರದೇಶದ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದಾಗಿರುತ್ತದೆ.

81). ಹೈದರಾಬಾದ್-ಕರ್ನಾಟಕ ಪ್ರದೇಶದಲ್ಲಿನ ಅಭ್ಯರ್ಥಿಗಳಿಗೆ ವಯೋಮಿತಿಯಲ್ಲಿ ಸಡಿಲಿಕೆ ಇದೆಯೇ?

ಉ: ಹೈದರಾಬಾದ್-ಕರ್ನಾಟಕ ಪ್ರದೇಶದಲ್ಲಿನ ಅಭ್ಯರ್ಥಿಗಳಿಗೆ ವಯೋಮಿತಿಯಲ್ಲಿ ಯಾವುದೇ ಸಡಿಲಿಕೆ ಇರುವುದಿಲ್ಲ.

82) ಹೈದರಾಬಾದ್-ಕರ್ನಾಟಕ ಪ್ರದೇಶದಲ್ಲಿನ ಅಭ್ಯರ್ಥಿಗಳು ಹೈದರಾಬಾದ್-ಕರ್ನಾಟಕ ಪ್ರದೇಶದ ಮೀಸಲಾತಿ ಯನ್ನು ಕೋರಲು ಸಲ್ಲಿಸಬೇಕಾದ ಪ್ರಮಾಣ ಪತ್ರವನ್ನು ಪಡೆಯಲು ಅವಶ್ಯಕವಾದ ಪ್ರಮಾಣ ಪತ್ರಗಳಾವುವು?

ಉ: ಒಬ್ಬ ಅಭ್ಯರ್ಥಿಯು ತಾನು ಸ್ಥಳೀಯ ವ್ಯಕ್ತಿಯೆಂದು ಮಾಡಿದ ಕ್ಲೇಮನ್ನು ರುಜುವಾತುಪಡಿಸಲು ಅರ್ಹತಾ ಪ್ರಮಾಣ ಪತ್ರವನ್ನು ನೀಡಲು ಈ ಮುಂದಿನ ಪ್ರಮಾಣ ಪತ್ರಗಳನ್ನು ಆಧಾರವಾಗಿಟ್ಟುಕೊಳ್ಳಬಹುದು:

ಎ) ಜನನ ಪ್ರಮಾಣ ಪತ್ರ, ಅಥವಾ

ಬಿ) ವಾಸಸ್ಥಳ ಪ್ರಮಾಣ ಪತ್ರ, ಅಥವಾ

ಸಿ) ವ್ಯಾಸಂಗ ಪ್ರಮಾಣ ಪತ್ರ, ಅಥವಾ

ಡಿ) ವಿವಾಹ ಪ್ರಮಾಣ ಪತ್ರ, ಅಥವಾ

ಇ) ಸ್ವಗ್ರಾಮ (ಅಥವಾ ಸ್ಥಳ) ಪ್ರಮಾಣ ಪತ್ರ, ಅಥವಾ

ಎಫ್) ವಾರಸ ಪ್ರಮಾಣ ಪತ್ರ ಅಥವಾ

ಜಿ) ಈ ಮೇಲಿನ ಪ್ರಮಾಣ ಪತ್ರಗಳ ಒಂದು ಅಥವಾ ಹೆಚ್ಚಿನ ಸಂಯೋಜನೆ

ಅಭ್ಯರ್ಥಿಯು ಮೇಲ್ಕಂಡಂತೆ ತಿಳಿಸಲಾದ ಪ್ರಮಾಣ ಪತ್ರಗಳಲ್ಲಿ ಯಾವುದೇ ಒಂದು ಪ್ರಮಾಣ ಪತ್ರವನ್ನು ಅಥವಾ ಹೆಚ್ಚಿನವುಗಳನ್ನು ಉಪ ವಿಭಾಗಧಿಕಾರಿಗೆ ಸಲ್ಲಿಸತಕ್ಕದ್ದು. ಅವರು ಯುಕ್ತ ಪರಿಶೀಲನೆ ಮತ್ತು ಸಂಕ್ಷಿಪ್ತ ವಿಚಾರಣೆಯನ್ನು ನಡೆಸಿದ ತರುವಾಯ, ಅನುಬಂಧ-'ಎ' ಯಲ್ಲಿರುವಂತ ನಮೂನೆಯಲ್ಲಿ ಅರ್ಹತಾ ಪ್ರಮಾಣ ಪತ್ರವನ್ನು ನೀಡುತ್ತಾರೆ. ಇನ್ನೂ ಹೆಚ್ಚಿನ ವಿವರಗಳಿಗಾಗಿ ಅಧಿಸೂಚನೆಯನ್ನು ಗಮನಿಸತಕ್ಕದ್ದು.

## ಹೈದರಾಬಾದ್-ಕರ್ನಾಟಕ ಮೀಸಲಾತಿಯ ಸಲುವಾಗಿ ಪಡೆಯಬೇಕಾಗಿರುವ ಪ್ರಮಾಣ ಪತ್ರ :

ನೇರ ನೇಮಕಾತಿಯಲ್ಲಿ ಸ್ಥಳೀಯ ವ್ಯಕ್ತಿಯೆಂಬ ಮೀಸಲಾತಿಯನ್ನು ಕ್ಲೇಮು ಮಾಡುವ ಅರ್ಜಿದಾರರು ಒಂದು ಸ್ವಯಂ ಘೋಷಿತ ಪ್ರಮಾಣ ಪತ್ರವನ್ನು ಸಲ್ಲಿಸತಕ್ಕದ್ದು. ಪರಂತು ಅರ್ಜಿ ಸಲ್ಲಿಸುವ ದಿನಾಂಕದಂದು ಅರ್ಜಿದಾರರು ಸ್ಥಳೀಯ ವ್ಯಕ್ತಿಯೆಂದು ಅರ್ಹತೆ ಪಡೆಯುವುದು ಕಡ್ಡಾಯವಾಗಿರುತ್ತದೆ. ತಾತ್ಕಾಲಿಕವಾಗಿ ಆಯ್ಕೆಗೊಂಡ ಅಭ್ಯರ್ಥಿಗಳು ದಾಖಲಾತಿ ಪರೀಕ್ಷೆಗಳ ಸಮಯದಲ್ಲಿ ಸಕ್ಷಮ ಪ್ರಾಧಿಕಾರದಿಂದ ನೀಡಲಾದ ಅರ್ಹತಾ ಪ್ರಮಾಣ ಪತ್ರ (ಅನುಬಂಧ-ಎ) ನೀಡತಕ್ಕದ್ದು. ಅರ್ಹತಾ ಪ್ರಮಾಣ ಪತ್ರದಲ್ಲಿ ಸಕ್ಷಮ ಪ್ರಾಧಿಕಾರಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಲಾದ ಅಂತಿಮ ದಿನಾಂಕದಂದು ಅಭ್ಯರ್ಥಿಯು ಸಾರ್ವಜನಿಕ ಉದ್ಯೋಗ ಆದೇಶದಂತೆ ಸ್ಥಳೀಯ ವ್ಯಕ್ತಿಯೆಂದು ಅರ್ಹತೆ ಪಡೆದಿರುತ್ತಾನೆಂದು ಒಂದು ಅಡಿ ಟಿಪ್ಪಣಿಯನ್ನು ದಾಖಲಿಸುವುದು.

**ಸೂಚನೆ:-**

ಎ) ಈ ಮೇಲಿನ ಎಲ್ಲಾ ಪ್ರಮಾಣ ಪತ್ರಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕ ಅಂದರೆ 26.06.2020ರೊಳಗೆ ಪಡೆದಿರಬೇಕು ಹಾಗೂ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರಬೇಕು.

ಬಿ) ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದ ನಂತರ ಮಾಡಿಸುವ ಮೀಸಲಾತಿ ಪ್ರಮಾಣ ಪತ್ರಗಳನ್ನು ಯಾವುದೇ ಹಂತದಲ್ಲಿ ಗಣನೆಗೆ ತೆಗೆದುಕೊಳ್ಳುವುದಿಲ್ಲ.

ಸಿ) ಈ ಮೇಲೆ ನಮೂದಿಸಿರುವ ಎಲ್ಲಾ ಮೀಸಲಾತಿ ಪ್ರಮಾಣ ಪತ್ರಗಳ ನಮೂನೆಗಳನ್ನು ಅಧಿಸೂಚನೆಯ ಕೊನೆಯಲ್ಲಿ ನೀಡಲಾಗಿರುತ್ತದೆ.

ಡಿ) ಅಭ್ಯರ್ಥಿಗಳು ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸುವುದರಿಂದ ಯಾವುದೇ ಪ್ರಮಾಣ ಪತ್ರಗಳನ್ನು ಅರ್ಜಿಯೊಂದಿಗೆ ಲಗತ್ತಿಸಲು ಅವಕಾಶ ಇರುವುದಿಲ್ಲ, ಆದರೆ ಈ ಮೇಲಿನ ಪ್ರಮಾಣ ಪತ್ರಗಳನ್ನು / ದಾಖಲೆಗಳನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಅಂದರೆ, ದಿನಾಂಕ:26.06.2020ರ ಒಳಗೆ ಪಡೆದಿರಬೇಕು ಇಲ್ಲವೇ ಸಿಂಧುವಾಗಿರಬೇಕು ಹಾಗೂ ನೇಮಕಾತಿ ಸಮಿತಿಯು ಪರಿಶೀಲನೆಗಾಗಿ ಹಾಜರುಪಡಿಸಲು ಸೂಚಿಸಿದಾಗ ಅರ್ಜಿಯಲ್ಲಿ ನಮೂದಿಸಿರುವ ಮೀಸಲಾತಿಯ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ತಪ್ಪದೇ ಹಾಜರುಪಡಿಸತಕ್ಕದ್ದು, ತಪ್ಪಿದ್ದಲ್ಲಿ ಕೆಳಕಂಡ ಕ್ರಮ ಕೈಗೊಳ್ಳಲಾಗುವುದು.

ಇ) ವಿವಿಧ ಮೀಸಲಾತಿ ಕೋರಿ ಹಾಜರು ಪಡಿಸಬೇಕಾದ ಪ್ರಮಾಣ ಪತ್ರಗಳನ್ನು ಹಾಜರು ಪಡಿಸದಿದ್ದಲ್ಲಿ, ಆ ಮೀಸಲಾತಿಯನ್ನು ರದ್ದು ಪಡಿಸಲಾಗುವುದು ಹಾಗೂ ಕೋರಲಾದ ಜಾತಿ/ಪಂಗಡ/ಪ್ರವರ್ಗಕ್ಕೆ ಸಂಬಂಧಿಸಿದಂತೆ, ಪ್ರಮಾಣ ಪತ್ರವನ್ನು ಹಾಜರುಪಡಿಸದಿದ್ದಲ್ಲಿ ಅಂತಹ ಅಭ್ಯರ್ಥಿಯ ಅಭ್ಯರ್ಥಿತನವನ್ನು ಸಾಮಾನ್ಯ ವರ್ಗದಡಿಯಲ್ಲಿ ಅರ್ಹತೆ ಹೊಂದಿದ್ದಲ್ಲಿ ಮಾತ್ರ ಸಾಮಾನ್ಯ ಅರ್ಹತೆಯ ಅಭ್ಯರ್ಥಿಯೆಂದು ಪರಿಗಣಿಸಲಾಗುವುದು.

**ವಿಶೇಷ ಸೂಚನೆ :-**

1) **ನಿಗದಿಪಡಿಸಿರುವ ನಮೂನೆಯ ಜಾತಿ/ಪ್ರವರ್ಗ ಪ್ರಮಾಣ ಪತ್ರಗಳು ಸಂಬಂಧಪಟ್ಟ ತಹಶೀಲ್ದಾರ್‌ರವರಿಂದ ಮತ್ತು ಯೋಜನಾ ನಿರಾಶ್ರಿತ ಪ್ರಮಾಣ ಪತ್ರ, ಕನ್ನಡ ಮಾಧ್ಯಮ ಪ್ರಮಾಣ ಪತ್ರ, ಗ್ರಾಮೀಣ ಪ್ರಮಾಣ ಪತ್ರ ಹೈದ್ರಾಬಾದ್- ಕರ್ನಾಟಕ ಮೀಸಲಾತಿ ಮತ್ತು ಮಾಜಿ ಸೈನಿಕನ ವಿಯೋಜನೆ ಪ್ರಮಾಣ ಪತ್ರ (ಪೂರ್ವಾನುಮತಿ) ಗಳನ್ನು ಅರ್ಜಿ ಸಲ್ಲಿಸಲು ನಿಗದಿ ಪಡಿಸಿರುವ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು.**

2) **ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳಿಗೆ ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆ, ಲಿಖಿತ ಪರೀಕ್ಷೆ ಮತ್ತು ವೈದ್ಯಕೀಯ ಪರೀಕ್ಷೆ ನಡೆಯುವುದರ ಬಗ್ಗೆ ಅರ್ಹಗೊಂಡ ಅಭ್ಯರ್ಥಿಗಳಿಗೆ ಯಾವುದೇ ಪತ್ರ ವ್ಯವಹಾರವನ್ನು ಮಾಡಲಾಗುವುದಿಲ್ಲ ಮತ್ತು ಅಭ್ಯರ್ಥಿಗಳು ಪೊಲೀಸ್ ಇಲಾಖೆಯ ಅಧಿಕೃತ ವೆಬ್‌ಸೈಟ್‌ನ ಮುಖಾಂತರ ಪಡೆಯಬಹುದಾಗಿದೆ.**

೩) **ಇನ್ನೂ ಹೆಚ್ಚಿನ ಮಾಹಿತಿ ಬೇಕಿದ್ದಲ್ಲಿ ನೇಮಕಾತಿ ಕಛೇರಿಯ ಈ ಕೆಳಕಂಡ ಸಹಾಯವಾಣಿಯ ಸಂಖ್ಯೆ ಮತ್ತು ಇಮೇಲ್ ನಿಂದ ಪಡೆಯಬಹುದಾಗಿರುತ್ತದೆ ಹಾಗೂ ಅರ್ಜಿ ತುಂಬುವ ವಿಧಾನ ಪೊಲೀಸ್ ಇಲಾಖೆಯ ಅಧಿಕೃತ ವೆಬ್‌ಸೈಟ್ www.ksp.gov.in ನಲ್ಲಿನ ಮಾಹಿತಿ ಸೂಚಿಯಲ್ಲಿ ಲಭ್ಯವಿರುತ್ತದೆ.**

4) **ಸಹಾಯವಾಣಿ ಸಂಖ್ಯೆ : 080-22943346.**